ಸಂಪುಟ 01 । ಸಂಚಿಕೆ 35 । ಮಂಗಳವಾರ 16 ಡಿಸೆಂಬರ್ 2025 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1.ವಿಜಯ್ ದಿವಸ್ (Vi jay Diwas)–ಭಾರತ**
ವಿಶೇಷತೆ: ಡಿಸೆಂಬರ್ 16 ಅನ್ನು ಭಾರತದಲ್ಲಿ 'ವಿಜಯ್ ದಿವಸ್' ಅಥವಾ 'ವಿಜಯ ದಿನ' ಎಂದು ಆಚರಿಸಲಾಗುತ್ತದೆ.ಹಿನ್ನೆಲೆ: 1971 ರ ಭಾರತ-ಪಾಕಿಸ್ತಾನ ಯುದ್ಧದಲ್ಲಿ ಭಾರತವು ಸಾಧಿಸಿದ ನಿರ್ಣಾಯಕ ವಿಜಯವನ್ನು ಮತ್ತು ಬಾಂಗ್ಲಾದೇಶದ ವಿಮೋಚನೆಯನ್ನು ಇದು ಸ್ಮರಿಸುತ್ತದೆ. ಹತ್ವ: ಈ ದಿನ, ಯುದ್ಧದಲ್ಲಿ ಹುತಾತ್ಮರಾದ ಭಾರ ತೀಯ ಸೈನಿಕರ ತ್ಯಾಗ ಮತ್ತು ಶೌರ್ಯವನ್ನು ಗೌರವಿಸಲಾಗುತ್ತದೆ. ಈ ವಿಜಯವು ವಿಶ್ವದ ಇತಿಹಾಸದಲ್ಲಿ ಒಂದು ಪ್ರಮುಖ ಘಟನೆಯಾಗಿದೆ.

**2.Day of Reconciliation (ಸೌಹಾರ್ದತಾ ದಿನ)** – ದಕ್ಷಿಣ ಆಫ್ರಿಕಾ: ದಕ್ಷಿಣ ಆಫ್ರಿಕಾದಲ್ಲಿ, ಈ ದಿನವನ್ನು ರಾಷ್ಟ್ರೀಯ ಏಕತೆ ಮತ್ತು ಸೌಹಾರ್ದತೆಯನ್ನು ಉತ್ತೇಜಿಸಲು ಆಚರಿಸಲಾಗುತ್ತದೆ.

**3.National Chocolate Covered Any-thing Day** (ರಾಷ್ಟ್ರೀಯ ಚಾಕೊಲೇಟ್-ಆವೃತವಾದ ದಿನ) – US (ಅನಧಿಕೃತ): ಇದು ಚಾಕೊಲೇಟ್ ಲೇಪಿತ ಆಹಾರ ಪದಾರ್ಥಗಳನ್ನು ಸವಿಯಲು ಪ್ರೋತ್ಸಾಹಿಸುವ ಒಂದು ಮೋಜಿನ ಅನಧಿಕೃತ ದಿನವಾಗಿದೆ

## ಸುಭಾಷಿತ

ಸೂರ್ಯನಂತೆ ಹೊಳೆಯುವ ಆಸೆ
ನಿಮಗಿದ್ದರೆ ಮೊದಲು ಸೂರ್ಯನಂತೆ
ಹೊತ್ತಿ ಉರಿಯುವುದನ್ನು ಕಲಿಯಿರಿ?

ಡಾ ಎ.ಪಿ.ಜೆ ಅಬ್ದುಲ್ ಕಲಾಂ

# ಕರ್ನಾಟಕದ ಬಿಜೆಪಿ ಅಧ್ಯಕ್ಷರಾಗಿ ಬಿ.ವೈ.ವಿಜಯೇಂದ್ರ ಮುಂದುವರಿಕೆ ಬಹುತೇಕ ಫಿಕ್ಸ್..?

**ಬೆಳಗಾವಿ: ಬಿಜೆಪಿ ರಾಷ್ಟ್ರೀಯ ಕಾರ್ಯಾಧ್ಯಕ್ಷ ಹಾಗೂ ಉತ್ತರ ಪ್ರದೇಶದ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಹೆಸರುಗಳನ್ನು ಘೋಷಣೆ ಮಾಡಿರುವ ಹಿನ್ನಲೆಯಲ್ಲಿ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಚುರುಕುಗೊಳಿಸಿರುವ ಬಿಜೆಪಿ, ಕರ್ನಾಟಕ ಘಟಕದ ಅಧ್ಯಕ್ಷರ ನೇಮಕ ಅಂತಿಮಗೊಳಿಸಲು ಮುಂದಾಗಿದೆ.**

ರಾಜ್ಯ ಬಿಜೆಪಿ ಘಟಕಕ್ಕೆ ನೂತನ ಅಧ್ಯಕ್ಷರ ನೇಮಕ ಪ್ರಕ್ರಿಯೆ ಆರಂಭವಾಗಿದ್ದು, ಈ ತಿಂಗಳ ಅಂತ್ಯದೊಳಗೆ ನೂತನ ಅಧ್ಯಕ್ಷರ ಹೆಸರು ಘೋಷಣೆಯಾಗುವ ಸಾಧ್ಯತೆಗಳಿವೆ. ಕರ್ನಾಟಕದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರನ್ನು ಯಾವಾಗಲೂ ಚುನಾವಣೆಯಿಲ್ಲದೆ ಸರ್ವಾನುಮತದಿಂದ ಆಯ್ಕೆ ಮಾಡಲಾಗುತ್ತದೆ. ಇದರಂತೆ ಪಕ್ಷವು ಅರ್ಹತಾ ಪ್ರಕ್ರಿಯೆಯನ್ನು ಬಹುತೇಕ ಪೂರ್ಣಗೊಳಿಸಿದ್ದು, ವಿವಿಧ ಜಿಲ್ಲೆಗಳಿಗೆ ಪದಾಧಿಕಾರಿಗಳ ನೇಮಕಯನ್ನೂ ಅಂತಿಮಗೊಳಿಸಿದೆ. ಕರ್ನಾಟಕದಲ್ಲಿ ಬಿಜೆಪಿ ಅಧ್ಯಕ್ಷ ಸ್ಥಾನಕ್ಕೆ ಬಿ.ವೈ.ವಿಜಯೇಂದ್ರ ಅವರೇ ಅಂತಿಮ



ಎಂಬ ಮಾತುಗಳು ಕೇಳಿಬಂದಿವೆ. ಕಳೆದ ಲೋಕಸಭಾ ಚುನಾವಣೆ ಎದುರಿಸಿ ಉತ್ತಮ ಫಲಿತಾಂಶ ತಂದುಕೊಟ್ಟಿದ್ದ ವಿಜಯೇಂದ್ರಗೆ ಮುಂದೆಯೂ ಸಾರಥ್ಯ ಇರಲಿ ಎಂದು ಜಿಲ್ಲಾ ಘಟಕಗಳ ಅಧ್ಯಕ್ಷರು ಹೇಳಿದ್ದಾರೆ ಎನ್ನಲಾಗಿದೆ.

ಆದರೆ, ಹೈಕಮಾಂಡ್ ಘೋಷಣೆ ಬಳಿಕವಷ್ಟೇ ಖಚಿತವಾಗಲಿದೆ. ಇನ್ನು ವಿಜಯೇಂದ್ರ ಅವನ್ನು ಬಿಟ್ಟರೆ ಶಾಸಕ ಸುನೀಲ್ ಕುಮಾರ್, ಮುರುಗೇಶ ನಿರಾಣಿ, ಕೇಂದ್ರ ಸಚಿವ ಸಚಿವ ವಿ.ಸೋಮಣ್ಣ ಹೆಸರುಗಳು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಕೇಳಿ ಬರುತ್ತಿವೆ. ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಸ್ಥಾನಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಹಿಂದೇಟು ಹಾಕುತ್ತಿರುವುದರಿಂದ ಬಿ.ವೈ.ವಿಜಯೇಂದ್ರ ಅವರ ಹೆಸರು ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ. ತಾವು ರಾಜ್ಯ ರಾಜಕಾರಣಕ್ಕೆ ಬರುವುದಿಲ್ಲ ಎಂದು ಶೋಭಾ ಇತ್ತೀಚೆಗೆ ಹೇಳಿದ್ದಾರೆ. ಈ ಹಿನ್ನೆಲೆಯಲ್ಲಿ ವಿಜಯೇಂದ್ರ ಅವರನ್ನು ನೇಮಿಸುವ ಬಗ್ಗೆ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಮತ್ತು ಗೃಹ ಸಚಿವ ಅಮಿತ್ ಶಾ ಅವರು ಒಲವು ಹೊಂದಿದ್ದಾರೆ. ಆದರೆ ಇದಕ್ಕೆ ಪ್ರಧಾನಿ ಮೋದಿ ಅವರ ಒಪ್ಪಿಗೆಯ ಅಗತ್ಯವಿದೆ ಎಂದು ಮೂಲಗಳು ತಿಳಿಸಿವೆ. ಜನಪ್ರಿಯತೆ, ಹಣ ಖರ್ಚು ಮಾಡುವ ಹಾಗೂ ಪಕ್ಷವನ್ನು ಸಂಘಟಿಸುವ ಸಾಮರ್ಥ್ಯ ವಿಜಯೇಂದ್ರ ಅವ-ರಿಗಿದೆ. ರಾಜ್ಯದ ಉದ್ದಗಲಕ್ಕೂ ಓಡಾಡಿ ಪಕ್ಷವನ್ನು ಕಟ್ಟಬಲ್ಲರು. ಯಡಿಯೂರಪ್ಪ ಅವರೂ ಪೂರ್ಣ ಮನಸ್ಸಿನಿಂದ ಕೆಲಸ ಮಾಡಬಲ್ಲರು ಎಂಬ ಚರ್ಚೆಯೂ ಪಕ್ಷದಲ್ಲಿ ನಡೆದಿದೆ.

ಬಿಜೆಪಿಯಲ್ಲಿ ವಿಜಯೇಂದ್ರ ಅವರನ್ನು ಪೂರ್ಣ ಪ್ರಮಾಣದ ಅವಧಿಗೆ ರಾಜ್ಯಾಧ್ಯಕ್ಷರನ್ನಾಗಿ ನೇಮಕ ಮಾಡುವ ಬಗ್ಗೆ ಮೂರು ಗುಂಪುಗಳಾಗಿವೆ. ವಿಜಯೇಂದ್ರ ನೇಮಕದ ಪರವಾಗಿರುವ

4ನೇ ಪುಟಕ್ಕೆ

## ತಾಲೂಕು ಪತ್ರಕರ್ತರ ಸಂಘದ ಚುನಾವಣೆ ಅಧ್ಯಕ್ಷರಾಗಿ ಸರ್ಕಿಲ್, ಉಪಾಧ್ಯಕ್ಷರಾಗಿ ಆನಂದ ಗುಡಿ ಆಯ್ಕೆ



**ನೈಜ್ಯ ದೆಸೆ ನ್ಯೂಸ್**

**ದೇವದುರ್ಗ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದೇವದುರ್ಗ ತಾಲೂಕು ಘಟಕದ ಅಧ್ಯಕ್ಷರಾಗಿ ನರಸಿಂಗ್ ರಾವ್ ಸರ್ಕಿಲ್ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ರವಿಕುಮಾರ ಅಳ್ಳುಂಡಿ ಆಯ್ಕೆಯಾದರು. ದೇವದುರ್ಗ ಪಟ್ಟಣದ ಎಪಿಎಂಸಿ ಸಭಾಂಗಣದಲಿ ರವಿವಾರ ಬೆಳಗ್ಗೆ ತಾಲೂಕು ಘಟಕಕ್ಕೆ ಚುನಾವಣೆ ಪ್ರಕ್ರಿಯೆ ನಡೆಸಲಾಯಿತು.**

ಅಧ್ಯಕ್ಷ ಸ್ಥಾನಕ್ಕೆ ನರಸಿಂಗರಾವ್ ಸರ್ಕಿಲ್ , ಬೆಳ್ಳಿಯಪ್ಪ ಬಲ್ಲಿದವ ನಾಮಪತ್ರ ಸಲ್ಲಿಸಿದರೆ, ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ರವಿಕುಮಾರ ಪಾಟೀಲ್ ಅಳ್ಳುಂಡಿ, ನಾಗರಾಜ್ ತೇಲ್ಕರ್ ನಾಮಪತ್ರ ಸಲ್ಲಿಸಿದ್ದರು. ನರಸಿಂಗರಾವ್ ಸರ್ಕಿಲ್ 16 ಮತಗಳು ಪಡೆದು ಆಯ್ಕೆಯಾದರೆ, ಬೆಳ್ಳಿಯಪ್ಪ 11 ಮತಗಳನ್ನು ಪಡೆದು ಪರಾಭವಗೊಂಡರು. ಇನ್ನೂ ರವಿಕುಮಾರ ಅಳ್ಳುಂಡಿ 18 ಸ್ಥಾನ ಪಡೆದು ಆಯ್ಕೆಯಾದರೆ, ನಾಗರಾಜ್ ತೇಲ್ಕರ್ 7 ಮತಗಳನ್ನು ಪಡೆದು ಪರಾಭವಗೊಂಡರು. ಒಂದು ಮತ ತಿರಸ್ಕೃತಗೊಂಡರೆ, ಒಂದು ಮತ ಚಲಾವಣೆ ಆಗಿರಲಿಲ್ಲ.

ಇನ್ನೂ ಎರಡು ಉಪಾಧ್ಯಕ್ಷ ಸ್ಥಾನಗಳಿಗೆ ಬೂದಿಬಸವ, ಆನಂದ ಗುಡಿ ಮಾತ್ರ ನಾಮಪತ್ರ ಸಲ್ಲಿಸಿದರೆ, ಕಾರ್ಯದರ್ಶಿ ಸ್ಥಾನಕ್ಕೆ ಕೆ.ಬಂದೇನವಾಜ್ , ಚಂದ್ರಶೇಖರ ನಾಡಗೌಡ ಹಾಗೂ ಖಜಾಂಚಿ ಸ್ಥಾನಕ್ಕೆ ರಂಗನಾಥ ಕೊಂಬಿನ್ ಮಾತ್ರ ಉಮೇದುವಾರಿಕೆ ಸಲ್ಲಿಸಿದ್ದ-ರಿಂದ ಅವಿರೋಧ ಆಯ್ಕೆ ಮಾಡಲಾಯಿತು. ಜಿಲ್ಲಾಧ್ಯಕ್ಷ ಆರ್. ಗುರುನಾಥ ಫಲಿತಾಂಶ ಪ್ರಕಟಿಸಿ ವಿಜೇತರಿಗೆ ಪ್ರಮಾಣಪತ್ರ ವಿತರಿಸಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ಧಯ್ಯ ಸ್ವಾಮಿ ಕುಕನೂರು, ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ, ಜಿಲ್ಲಾ ಉಪಾಧ್ಯಕ್ಷರಾದ ಸೂಗೂರೇಶ ಎಸ್.ಗುಡಿ, ಮಹಾನಂದ ನಾಯಕ, ಜಿಲ್ಲಾ ಖಜಾಂಚಿ ಮಲ್ಲಿಕಾರ್ಜುನಯ್ಯ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ಲಕ್ಷ್ಮಿ ಪ್ರಸನ್ನ ಜೈನ್ ನೇತೃತ್ವದಲ್ಲಿ ಚುನಾವಣೆ ಪ್ರಕ್ರಿಯೆ ನಡೆಸಲಾಯಿತು.

## ಡಿಸೆಂಬರ್ 17ರಂದು ವಿವಿಧ ದಿನಾಚರಣೆಯ ಪೂರ್ವಭಾವಿ ಸಭೆ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು ಡಿಸೆಂಬರ್ 15 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಡಿಸೆಂಬರ್29 ರಂದು ವಿಶ್ವಮಾನವ ದಿನಾಚರಣೆ ಹಾಗೂ ಜನವರಿ 01ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಕರಣಾ ದಿನಾಚರಣೆ ನಡೆಯಲಿವೆ.**

ಈ ದಿನಾಚರಣೆ ಅಂಗವಾಗಿ ಡಿಸೆಂಬರ್ 17ರ ಮಧ್ಯಾಹ್ನ 3.30ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಬಹುದಾಗಿದೆ. ಅಂದು ನಡೆಯುವ ಪೂರ್ವಭಾವಿ ಸಭೆಗೆ ಸಂಬಂಧಿತ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಸಮಾಜದ ಮುಖಂಡರುಗಳು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಮನೂರು ಶಿವಶಂಕರಪ್ಪರವರಿಗೆ ಭಾವಪೂರ್ಣ ಶ್ರದ್ಧಾಂಜಲಿ



**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ಸಿಂಧನೂರು ನಗರದ ಶಾಸಕರ ಕಾರ್ಯದಲ್ಲಿ ನಿನ್ನೆ ದೈವ ದೀನರಾಗಿರುವ ಅಖಿಲ ಭಾರತ ಲಿಂಗಾಯಿತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರು ಹಿರಿಯ ಶಾಸಕರಾದ ಶ್ರೀ ಶಾಮನೂರು ಶಿವಶಂಕರಪ್ಪ ರವರಿಗೆ ಗೌರವ ನಮನ ಸಲ್ಲಿಸಿ ಅವರ ಆತ್ಮಕ್ಕೆ ಚಿರಶಾಂತಿ ಕೋರಲಾಯಿತು.**

ಈ ಸಂದರ್ಭದಲ್ಲಿ ಶ್ರೀ ಪಂಪನಗೌಡ ಬಾದರ್ಲಿ ಆರ್ ಡಿ ಸಿ ಸಿ ಬ್ಯಾಂಕ್ ನಿರ್ದೇಶಕರು. ಖಾಜಿ ಮಲ್ಲಿಕ್ ವಕೀಲರು ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಅನಿಲ್ ಕುಮಾರ್ ವೈ ನಗರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಗ್ಯಾರಂಟಿ ಅಧ್ಯಕ್ಷರು, ಲಿಂಗಪ್ಪ ಎಂ ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಕಾಂಗ್ರೆಸ್ ಮುಖಂಡರಾದ ಎನ್. ಅಮರೇಶ್ ಮಲ್ಲನಗೌಡ ಮಾವಿನಮಡಗು, ರಾಮನಗೌಡ ಮಲ್ಕಾಪುರ್ ವೀರಭದ್ರಗೌಡ ಕನಿಹಾಳ, ಛತ್ರಪ್ಪ, ಸಿದ್ದನಗೌಡ ವಿರುಪಾಪುರ ಎಚ್. ಭಾಷ ನಗರಸಭೆ ಸದಸ್ಯರು, ಅಮರಯ್ಯ ಸ್ವಾಮಿ ಹನುಮೇಶ ಮುಳ್ಳೂರು ಇಜೆ ಶಪುಯುಲ್ ಖಾನ್ ಜಿಲ್ಲಾ ಕೆಡಿಪಿ ಸದಸ್ಯರು, ಮತ್ತಿತರರು ಅವರ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

## ಪ್ರಜಾಪ್ರಭುತ್ವದಲ್ಲಿ ಮತದಾನದ ಪಾತ್ರ ಮಹತ್ವದ್ದು: ಡಾ.ಈರಣ್ಣ ಕೋಸಗಿ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು ಡಿಸೆಂಬರ್ 15 : ತಾಲೂಕು ಆಡಳಿತ, ತಾಲೂಕು ಪಂಚಾಯತ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರುಗಳ ಸಂಯುಕ್ತಾಶ್ರಯದಲ್ಲಿ ರಾಷ್ಟಿಯ ಮತದಾರರ ದಿನಾಚರಣೆಯ ಅಂಗವಾಗಿ ರಾಯಚೂರು ತಾಲೂಕಾ ಮಟ್ಟದ ಪ್ರಬಂಧ ಸ್ಪರ್ಧೆ ಕಾರ್ಯಕ್ರಮವು ನಗರದ ಹಾಶ್ಮಿಯ ಸರ್ಕಾರಿ ಹಿರಿಯ ಪ್ರಾಥ-ಮಿಕ ಶಾಲೆಯಲ್ಲಿ ಆಯೋಜಿಸಲಾಯಿತ್ತು.**

ಕಾರ್ಯಕ್ರಮಕ್ಕೆ ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಡಾ. ಈರಣ್ಣ ಕೋಸಗಿ ಅವರು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟಿಸಿ, ಅವರು ಮಾತನಾಡಿ, ಚುನಾವಣೆಯ ಸಂದರ್ಭದಲ್ಲಿ ಒಂದೊಂದು ಮತವು ಅತ್ಯಮೂಲ್ಯವಾಗಿದೆ. ವಿದ್ಯಾರ್ಥಿಗಳಲ್ಲಿ ಮತದಾನದ ಜಾಗೃತಿಯ ಮೂಡಿಸಲು ಪ್ರತಿ ವರ್ಷ ರಾಷ್ಟಿಯ ಮತದಾರ ದಿನಾಚರಣೆ



ಹಿನ್ನಲೆಯಲ್ಲಿ ಹಲವಾರು ಸ್ಪರ್ಧೆಗಳನ್ನು ಆಯೋಜನೆ ಮಾಡಲಾಗುತ್ತದೆ. ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಅಚ್ಚುಕಟ್ಟಾಗಿ ಭಾಗವಹಿಸಬೇಕು. ವಿದ್ಯಾರ್ಥಿಗಳು ಜಿಲ್ಲಾ, ರಾಜ್ಯಮಟ್ಟಕ್ಕೆ ಆಯ್ಕೆ ಆಗುವುದರ ಮೂಲಕ ರಾಯಚೂರು ತಾಲೂಕಿಗೆ ಕೀರ್ತಿ ತರಬೇಕೆಂದರು.

ಈ ವೇಳೆ ಮತದಾರರ ಸಾಕ್ಷರತಾ ಕ್ಲಬ್ ಜಿಲ್ಲಾ ನೂಡಲ್ ಅಧಿಕಾರಿ ಡಾ.ದಂಡಪ್ಪ ಬಿರಾದಾರ್ ಅವರು ಮಾತನಾಡಿ, ನಮ್ಮದು ಪ್ರಜಾಪ್ರಭುತ್ವ ರಾಷ್ಟ್ರ. ಲಿಖಿತ ಸಂವಿಧಾನ ಹೊಂದಿರುವಂತಹ ದೇಶ. ನಮ್ಮ ದೇಶದಲ್ಲಿ ಜನನಾಯಕನ ಆಯ್ಕೆ ಮಾಡಲು ಮತದಾನದ ಮೂಲಕ ಆಯ್ಕೆ ಮಾಡುತ್ತಿರುವುದು ತಮಗೆಲ್ಲ ತಿಳಿದಿರುವ ವಿಷಯ. ಈ ಒಂದು ಪ್ರಬಂಧ ಸ್ಪರ್ಧೆಯನ್ನು ಶಾಲಾ ಮಟ್ಟದಲ್ಲಿ ಮುಖ್ಯ ಗುರುಗಳು ನೇತೃತ್ವದಲ್ಲಿ ನಡೆಯುತ್ತದೆ. ತಾಲೂಕ ಮಟ್ಟದಲ್ಲಿ ಕ್ಷೇತ್ರ ಶಿಕ್ಷಣ ಅಧಿಕಾರಿಗಳ ಮಾರ್ಗದರ್ಶನದಲ್ಲಿ ನಡೆಯುತ್ತದೆ. ವಿದ್ಯಾರ್ಥಿಗಳು ಈ ಒಂದು ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನವನ್ನು ಆಯ್ಕೆ ಮಾಡಲಾಗುತ್ತದೆ ಎಂದರು. ಜಿಲ್ಲಾ ಮಟ್ಟಕ್ಕೆ ಪ್ರಥಮ ಹಾಗೂ ದ್ವಿತೀಯ ಸ್ಥಾನವನ್ನು ಪಡೆದಂತ ವಿದ್ಯಾರ್ಥಿಗಳ ಹೆಸರನ್ನ ಕಳಿಸಿಕೊಡಲಾಗುತ್ತದೆ. ತಾಲೂಕ ಜಿಲ್ಲಾ ಮತ್ತು ರಾಜ್ಯ ಮಟ್ಟಕೆ ಆಯ್ಕೆ ಆದಂತಹ ವಿದ್ಯಾರ್ಥಿಗಳಿಗೆ ರಾಷ್ಟಿಯ ಮತದಾರ ದಿನಾಚರಣೆ ದಿನದಂದು ಪ್ರಶಸ್ತಿ ಪತ್ರ ಮತ್ತು ಬಹುಮಾನವನ್ನು ಕೊಟ್ಟು ಗೌರವಿಸಲಾಗುವುದು ಎಂದರು.

## ಸಿಂಧು ಶಿಶು ಸುರಕ್ಷಾ ಯೋಜನೆ ಸಾಮಾಜಿಕ ಬದ್ಧತೆಯ ಯೋಜನೆಯಾಗಿದೆ :ಹೊನ್ನಪ್ಪ ಮೇಟಿ

**ನೈಜ್ಯ ದೆಸೆ ನ್ಯೂಸ್**

**ಲಿಂಗಸಗೂರು: ಡಿ.16: –ಸಿಂಧು ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘ ನಿ., ಸಿಂಧನೂರು ಇವರು ಜಾರಿಗೆ ತಂದಿರುವ ಸಿಂಧು ಶಿಶು ಸುರಕ್ಷಾ ಯೋಜನೆಯು ಸಾಮಾಜಿಕ ಬದ್ಧತೆಯ ಕಳಕಳಿಯ ಯೋಜನೆಯಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಉಪಾಧ್ಯಕ್ಷರಾದ ಹೊನ್ನಪ್ಪ ಮೇಟಿ ಹೇಳಿದರು.**

ತಾಲೂಕಿನ ನಾಗರಹಾಳ ಗ್ರಾಮದಲ್ಲಿ ಸಿಂಧು ಕ್ರೆಡಿಟ್ ಸೌಹಾರ್ದ ಸಹಕಾರ ಸಂಘ ಜಾರಿಗೆ ತಂದಿರುವ ಸಿಂಧು ಶಿಶು ಸುರಕ್ಷಾ ಯೋಜನೆಯ ಕುರಿತು ಹಾಗೂ 2026 ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡುತ್ತಾ ಈ ಸಹಕಾರಿ ಸಂಘವು ಜನಸಾಮಾನ್ಯರಿಗೆ ಒಳ್ಳೆಯದಾಗುವ ರೀತಿಯಲ್ಲಿ ಕಾರ್ಯಗಳನ್ನು



ಮಾಡುತ್ತಾ ಬಂದಿದ್ದು ಇಂತಹ ವಿಶಿಷ್ಟ ಹಾಗೂ ಸಾಮಾಜಿಕ ಬದ್ಧತೆಯ ಯೋಜನೆಯನ್ನು ಇದುವರೆಗೆ ಯಾವುದೇ ಸಹಕಾರಿಯೂ ಜಾರಿಗೆ ತಂದಿಲ್ಲ. ಈ ಯೋಜನೆ ರಾಜ್ಯಮಟ್ಟದಲ್ಲಿ ಪ್ರಚಾರ ಪಡೆದು ಇತರೆ ಸಹಕಾರಿಗಳಿಗೆ ಪ್ರೇರಣೆಯಾಗಬೇಕು ಇಂತಹ ಯೋಜನೆಗಳಿಂದ ಆರ್ಥಿಕವಾಗಿ ಹಿಂದುಳಿದ ಬಡವರ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಅನುಕೂಲವಾಗಲಿದ್ದು ಜನರು ಇಂತಹ ಯೋಜನೆಯ ಲಾಭ ಪಡೆದು ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸುವಲ್ಲಿ ಮುಂದಾಗಬೇಕಾಗಿದೆ ಎಂದು ಅವರು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ ಮಾತನಾಡಿ ಹಿಂದೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಜಾರಿಗೆ ತಂದಿದ್ದ 'ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ'ಯನ್ನು ಹೋಲುವಂತೆ, ಸರ್ಕಾರಿ ಶಾಲೆಗಳ ಉಳಿವು ಹಾಗೂ ಹೆಣ್ಣು ಮಕ್ಕಳ ಭವಿಷ್ಯ ಭದ್ರತೆಗೆ ಸಿಂಧು ಸಹಕಾರಿಯು ರೂಪಿಸಿರುವ ಈ ಯೋಜನೆ ಪ್ರಧಾನಮಂತ್ರಿಗಳ 'ಬೇಟಿ ಬಚಾವೋ ಬೇಟಿ ಪಡಾವೋ' ಯೋಜನೆಯ ಕನ್ನಡಿಯಾಗಿದೆ," ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅಂತ್ಯೋದಯ ನಿಧಿ ಹಾಗೂ ಸಾಲ ಸುರಕ್ಷಾ ಯೋಜನೆಯಡಿ ಮೃತರಾದ ಯಂಕಪ್ಪ ಚನ್ನದಾಸರ ಅವರ ವಾರಸುದಾರರಾದ ಶ್ರೀಮತಿ ದುರಗಮ್ಮ ಗಂಡ ಯಂಕಪ್ಪ ಅವರಿಗೆ ರೂ.75,000/– ಮೊತ್ತದ ಪರಿಹಾರ ಚೆಕ್‌ನ್ನು ವಿತರಿಸಲಾಯಿತು. ಕಾರ್ಯಕ್ರಮಕ್ಕೆ ಸಹಕಾರಿಯ ಅಧ್ಯಕ್ಷರಾದ ರಾಜಶೇಖರ ಬಿ ಅಧ್ಯಕ್ಷತೆ ವಹಿಸಿದ್ದರು, ಮುಖ್ಯ ಅತಿಥಿಗಳಾಗಿ ಹನುಮಂತಪ್ಪ ಕ್ವಾರಿ, ತಾಲೂಕು ಜನಸಂಪನ್ಮೂಲ ಅಧಿಕಾರಿಗಳು ಹಾಗೂ ಸಹಕಾ-ರಿಯ ಉಪಾಧ್ಯಕ್ಷರಾದ ಅಮರೇಶ ಹಟ್ಟಿ, ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಹಕಾರಿಯ ನಿರ್ದೇಶಕರುಗಳಾದ ವಿಜಯಕುಮಾರ್ ಛಾಜೇಡ್, ಬಸವರಾಜ ಬಿ, ಶಂಕರಗೌಡ, ರಾಮಪ್ಪ ಕೆ, ಮುಖ್ಯ ಕಾರ್ಯನಿರ್ವಾಹಕರು , ನಾಗರಹಾಳ ಶಾಖಾ ಸಿಬ್ಬಂದಿಗಳು, ಸದಸ್ಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಸಾಹಿತ್ಯ ಸಿಂಚನ

ಅಜಾತಶತ್ರು ಲಿಂ.ಶಾಮನೂರ ಶಿವಶಂಕ್ರಪ್ಪ*

ಬೆಣ್ಣೆನಗರಿಯ ಖ್ಯಾತ ಕೊಂಡಿ ಕಳಚಿತು ಸಜ್ಜನ
ರಾಜಕಾರಣಿ.!
ಧರ್ಮದರ್ಶಿ ಶಾಮನೂರ ಶಿವಶಂಕ್ರಪ್ಪನವರು
ಇನ್ನಿಲ್ಲ.!!

ದಾವಣಗೆರೆ ಎಂದರೆ ಶಾಮನೂರು ಅದ್ಬುತ
ಮನೆತನವು.!
ಇತಿಹಾಸದಲ್ಲಿ ಉದ್ಯಮಿ ಎಂದು ಹೆಸರು
ಪಡೆದಂತವರು.!
13.6.1931ರಲ್ಲಿ ಕಲ್ಲಪ್ಪನವರ ಮಗನಾಗಿ
ಜನಸಿದಂತವರು.!
ಶಿವಶಂಕ್ರಪ್ಪನೆಂದು ಹಸನ್ ಮುಖಿಯಾಗಿ
ಬೆಳೆದವರು.!!

ಉದ್ಯಮದಲ್ಲಿ ಅವಿಸ್ಥಾರವಾಗಿ ಮುಗಿಲ್ಲೆತ್ತರಕ್ಕೆ
ಬೆಳೆದವರು.!
ರಾಜಕಾರಣದಲ್ಲಿ ಸೈ ಎನಿಸಿಕೊಂಡು ಬೆಳೆದಂತವರು.!
ಒಂದಲ್ಲ ಎರಡಲ್ಲ ಆರು ಬಾರಿ ಶಾಸಕರಾದಂತವರು.!
ಎಮ್ ಪಿ ಯಾಗಿ ಸಕ್ಕರೆ ಸಚಿವರಾಗಿ ಸೇವೆ
ಮಾಡಿದರು.!!

ಪತ್ನಿ ಪಾರ್ವತಿಯ ಮದುವೆ ಮಾಡಿಕೊಂಡು
ಬಂದವರು.!
ಅರ್ದ ಡಜನ್ ಮಕ್ಕಳ ಹೆತ್ತು ಆದರ್ಶದೊಳಿದ್ದವರು.!
ಶಿಕ್ಷಣದಲ್ಲಿ ಮೇರು ಪರ್ವ ಗರ್ವವವೇ ಇಲ್ಲದವರು.!
ದಾನ ಧರ್ಮ ಅನುಭಾವದಲಿ ಎತ್ತಿದ
ಮಹನಿಯರು.!!

ಅಖಿಲ ಭಾರತ ವೀರಶೈವ ಲಿಂಗಾಯತದ
ಅಧ್ಯಕ್ಷರು.!
ವೀರಶೈವ ಲಿಂಗಾಯತ ಒಂದುಗೂಡಿಸಿವಲ್ಲಿ
ಶ್ರಮಿಸಿದರು.!
ನಾಡಿನ ಹರಗುರು ಚರಮೂರ್ತಿಗಳು ಕಂಡ
ಮಹನಿಯರು.!
ವೀರಶೈವ ಲಿಂಗಾಯತ ಸಮಾಜಕ್ಕೆ ಸೇವೆ
ಸಲ್ಲಿಸಿದರು.!!

ಹತ್ತು ಹಲವು ಪ್ರಶಸ್ತಿಗಳನ್ನು ಮೂಡಿಗೇ–
ರಿಸಿಕೊಂಡವರು.!
ಕಾಯಕ ದಾಸೋಹ ಅನುಭವದಲ್ಲಿ ಹಿರಿಯರು.!
ಹಿರಿಯ ರಾಜಕಾರಣಿ ಎಂದು ಹೆಸರು ಪಡೆದವರು.!
ಕಂದ ಪಂಪಯ್ಯಯನ್ನು ಇವರ ನೆನೆದು ಶ್ರದ್ಧಾಂಜಲಿ
ಸಲ್ಲಿಸುವೆನು.!!

ಪಂಪಯ್ಯಸ್ವಾಮಿ ಸಾಲಿಮಠ ಅಂತರಗಂಗಿ ಸಿಂಧನೂರು

1ನೇ ಪುಟದಿಂದ....

ಮಾಜಿ ಸಿಎಂ ಯಡಿಯೂರಪ್ಪ ಬಣ, ಪಕ್ಷವನ್ನು ಬಿಎಸ್‌ವೈ ಹಿಡಿತದಿಂದ ಹೊರತರಬೇಕೆಂದು ಆಗ್ರಹಿಸುತ್ತಿರುವ ಬಿಜೆಪಿ ಅಸಮಾಧಾನಿತರ ಗುಂಪು. ಈ ಗುಂಪಿನಲ್ಲಿ ಪ್ರಮುಖವಾಗಿ ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್, ಮಾಜಿ ಸಚಿವರಾದ ಕುಮಾರ ಬಂಗಾರಪ್ಪ, ಅರವಿಂದ ಲಿಂಬಾವಳಿ, ರಮೇಶ್ ಜಾರಕಿಹೊಳಿ, ಶಾಸಕ ಬಿ.ಪಿ.ಹರೀಶ, ಮಾಜಿ ಸಂಸದ ಪ್ರತಾಪ ಸಿಂಹ ಮತ್ತು ಇತರ ನಾಯಕರಿದ್ದಾರೆ. ತಟಸ್ಥ ಗುಂಪಿನಲ್ಲಿ ಕೇಂದ್ರ ಸಚಿವ ವಿ. ಸೋಮಣ್ಣ, ಮಾಜಿ ಸಚಿವ ಸುನೀಲ್ ಕುಮಾರ್, ಸಿ.ಟಿ.ರವಿ ಸೇರಿದಂತೆ ಬಹುತೇಕ ಸಂಸದರಿದ್ದಾರೆ. ರಾಜ್ಯ ಬಿಜೆಪಿಗೆ ಪೂರ್ಣ ಪ್ರಮಾಣದ ಅಧ್ಯಕ್ಷರನ್ನಾಗಿ ವಿಜಯೇಂದ್ರ ಅವರನ್ನು ಆಯ್ಕೆ ಮಾಡುವುದಕ್ಕೆ ಅಪಸ್ವರವೆತ್ತಿರುವ ಪಕ್ಷದ ತಟಸ್ಥ ಬಣ ಮತ್ತು ಅಸಮಾಧಾನಿತ ಬಣದವರನ್ನು ವಿಶ್ವಾಸಕ್ಕೆ ತಗೆದುಕೊಂಡೇ ಹೊಸ ಅಧ್ಯಕ್ಷರ ಹೆಸರನ್ನು ಘೋಷಣೆ ಮಾಡಬೇಕೆನ್ನುವ ಧೋರಣೆಯನ್ನು ಪಕ್ಷದ ಹೈಕಮಾಂಡ್ ಹೊಂದಿದೆ ಎಂದು ಹೇಳಲಾಗಿದೆ. ಈ ಹಿನ್ನೆಲೆಯಲ್ಲಿ ವಿಜಯೇಂದ್ರ ನೇಮಕವನ್ನು ಪ್ರಬಲವಾಗಿ ವಿರೋಧಿಸಿ ಬಹಿರಂಗ ಹೇಳಿಕೆಗಳನ್ನು ನೀಡುತ್ತಿದ್ದ ಬಿಜೆಪಿಯ ಹಿರಿಯ ಮುಖಂಡರಾಗಿದ್ದ ಮಾಜಿ ಕೇಂದ್ರ ಸಚಿವ ಬಸನಗೌಡ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ. ಪ್ರತ್ಯೇಕ ಸಭೆಗಳನ್ನು ನಡೆಸಿ ಮುಜುಗರ ಮಾಡುತ್ತಿದ್ದ ಹಾಗೂ ಬಹಿರಂಗ ಹೇಳಿಕೆಗಳನ್ನು ನೀಡುತ್ತಿದ್ದ ಅತೃಪ್ತ ಬಣದ ಶಾಸಕ ಬಿ.ಪಿ. ಹರೀಶ್ ಅವರಿಗೆ ಶಿಸ್ತು ಕ್ರಮದ ನೋಟಿಸ್ ನೀಡಿ ಬಿಜೆಪಿ ಹೈಕಮಾಂಡ್ ಬಿಸಿ ಮುಟ್ಟಿಸಿತ್ತು. ಹೈಕಮಾಂಡ್‌ನ ಈ ಹೆಜ್ಜೆಗಳೆಲ್ಲಾ ವಿಜಯೇಂದ್ರ ಆಯ್ಕೆಗೆ ದಾರಿ ಸುಗಮಗೊಳಿಸುವುದಾಗಿದೆ ಎಂದೇ ವಿಶ್ಲೇಷಿಸಲಾಗುತ್ತಿದೆ. ಕೇಂದ್ರ ಸಚಿವ ವಿ.ಸೋಮಣ್ಣ ರಾಜ್ಯ ಬಿಜೆಪಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಅಧ್ಯಕ್ಷ ಸ್ಥಾನ ನೀಡುವುದಾದರೆ ಕೇಂದ್ರ ಸಚಿವ ಸ್ಥಾನವನ್ನು ಸಹ ಬಿಟ್ಟು ಬರಲು ಸಿದ್ಧವೆನ್ನುವ ಸಂದೇಶವನ್ನು ಸಹ ಸಚಿವ ಸೋಮಣ್ಣ ಹೈಕಮಾಂಡ್‌ಗೆ ರವಾನಿಸಿದ್ದಾರೆ. ಪಕ್ಷದ ಹಿರಿಯ ಮುಖಂಡರಾದ ಸಿ.ಟಿ.ರವಿ, ಮಾಜಿ ಉಪ ಮುಖ್ಯಮಂತ್ರಿ ಡಾ.ಅಶ್ವತ್ಥನಾರಾಯಣ, ಅರವಿಂದ ಲಿಂಬಾವಳಿ, ಮಾಜಿ ಸಚಿವ ಸುನೀಲ್ ಕುಮಾರ್, ಮಾಜಿ ಸಿಎಂ ಬಸವರಾಜ ಬೊಮಾಯಿ, ಅವರು ಪಕ್ಷ ಅವಕಾಶ ನೀಡಿದರೆ ರಾಜ್ಯ ಬಿಜೆಪಿ ಅಧ್ಯಕ್ಷ ಗಾದಿಗೇರಲು ಒಲವನ್ನು ಹೊಂದಿದ್ದಾರೆ ಎನ್ನಲಾಗಿದೆ. ಬಿಜೆಪಿ ಹೈಕಮಾಂಡ್ ಈ ಎಲ್ಲಾ ಹೆಸರುಗಳನ್ನು ಪರಿಶೀಲಿಸಿದ್ದು, ಸದ್ಯದ ಪರಿಸ್ಥಿತಿಯಲ್ಲಿ ಪ್ರಬಲ ಲಿಂಗಾಯತ ಸಮುದಾಯಕ್ಕೆ ಸೇರಿರುವ ಮತ್ತು ಮಾಜಿ ಸಿಎಂ ಯಡಿಯೂರಪ್ಪನವರ ಆಶೀರ್ವಾದ ಇರುವ ವಿಜಯೇಂದ್ರ ಆಯ್ಕೆಯೇ ಸಮಯೋಚಿತ ಎನ್ನುವ ನಿಲುವನ್ನು ದೆಹಲಿ ವರಿಷ್ಠರು ಹೊಂದಿದ್ದಾರೆ ಎನ್ನಲಾಗಿದೆ. ವಿಜಯೇಂದ್ರ ಅಧ್ಯಕ್ಷರಾಗಿ ನೇಮಕಗೊಂಡರೆ ಅತೃಪ್ತರ ಬಣಕ್ಕೆ ಮತ್ತು ತಟಸ್ಥ ಬಣದವರಿಗೆ ಪಕ್ಷದಲ್ಲಿ ಬೇರೆ ಗುರುತರ ಜವಾಬ್ದಾರಿ ನೀಡುವ ಸಾಧ್ಯತೆಗಳನ್ನೂ ಪರಿಶೀಲಿಸುತ್ತಿದ್ದಾರೆ. ಬಿಜೆಪಿ ಹೈಕಮಾಂಡ್ ಮನವೊಲಿಕೆಯ ನಡುವೆಯೂ ಅಸಮಾಧಾನಿತ ಮುಖಂಡರ ಗುಂಪು ವಿಜಯೇಂದ್ರ ಬದಲಾವಣೆಗೆ ತನ್ನ ಪಟ್ಟನ್ನು ಮುಂದುವರಿಸಿದೆ. ಆಡಳಿತಾರೂಢ ಕಾಂಗ್ರೆಸ್ ಪಕ್ಷದ ವಿರುದ್ಧ ಬಿಜೆಪಿ ಸಂಘಟನೆಯನ್ನು ಪ್ರಬಲವಾಗಿ ಕಟ್ಟಿ, ಬರುವ ವಿಧಾನಸಭೆ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರುವ ಸಾಮರ್ಥ್ಯ ವಿಜಯೇಂದ್ರ ಅವರಿಗೆ ಇಲ್ಲ. ಬಿಜೆಪಿಯನ್ನು ಮಾಜಿ ಸಿಎಂ ಯಡಿಯೂರಪ್ಪ ಕುಟುಂಬದ ಹಿಡಿತದಿಂದ ಹೊರತರುವ ಉದ್ದೇಶದಿಂದ ವಿಜಯೇಂದ್ರ ಹೊರತುಪಡಿಸಿ ಬೇರೆ ಯಾರನ್ನಾದರೂ ರಾಜ್ಯ ಅಧ್ಯಕ್ಷರನ್ನಾಗಿ ನೇಮಕ ಮಾಡುವ ಅವಶ್ಯಕತೆ ಇದೆಯೆನ್ನುವ ತಮ ಸ್ಪಷ್ಟ ಅಭಿಪ್ರಾಯವನ್ನು ಹೈಕಮಾಂಡ್‌ಗೆ ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

# ಕರ್ನಾಟಕ ರೈತ ಸಂಘದಿಂದ ವಿವಿಧ ಭೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟಿಸಿ ತಹಸೀಲ್ದಾರ್ ಭೋಗಾವತಿಯವರಿಗೆ ಮನವಿ ಸಲ್ಲಿಕೆ



ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಬಳಗಾನೂರು ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ವಿವಿಧ ಭೇಡಿಕೆಗಳನ್ನು ಈಡೇರಿಸಲು ಕರ್ನಾಟಕ ರೈತ ಸಂಘದಿಂದ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಮಂಜುನಾಥ ಭೋಗಾವತಿಗೆ ಸೋಮವಾರ ಮನವಿ ಪತ್ರ ಸಲ್ಲಿಸಲುವ ಮೂಲಕ ಒತ್ತಾಯಿಸಿದರು.**

ಪಟ್ಟಣದ ಹಳೇ ಬಸ್ ನಿಲ್ದಾಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಮುಂದುಗಡೆ ಪ್ರತಿಭಟನೆ ನಡೆಸಿದರು. ನಂತರ ತಾಲೂಕಾಧ್ಯಕ್ಷ ಸಂತೋಷ ಹಿರೇದಿನ್ನಿ ಮಾತನಾಡಿ ಬಸವೇಶ್ವರ ನಗರದ ಸರ್ವೆ ನಂ. 509, ರಲ್ಲಿ ಜನ ವಸತಿಗಾಗಿ ಭೂಮಿಯನ್ನು ಖರೀಸಿದಿಲಾಗಿದೆ. ಇದರಲ್ಲಿ ವ್ಯಕ್ತಿಗಳು 5 ಅಡಿ ರಸ್ತೆಯನ್ನು ಬಂದ್ ಮಾಡಿದ್ದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗಿದ್ದರಿಂದ ಕೂಡಲೇ ತೆರವುಗೊಳಿಸಬೇಕು. ಸದರಿ ಸ್ಥಳದಲ್ಲಿ ಅಂಬೇಡ್ಕರ್ ಭವನ ಮತ್ತು ಸಾರ್ವಜನಿಕರಿಗೆ ಹೈಟೆಕ್ ಶೌಚಾಲಯವನ್ನು ನಿರ್ಮಾನಿಸಬೇಕೆಂದು ಆಗ್ರಹಿಸಿದರು.

ಬಸವೇಶ್ವರ ನಗರದ ಜನರಿಗೆ ಮೂಲಭೂತ ಸೌಲಭ್ಯಗಳಿಲ್ಲದೇ ಅಲೆದಾಡುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದರು. ಭೇಡಿಕೆಗಳು: ಸ.ನಂ. 509/23 5 ಅಡಿ ರಸ್ತೆ ಬಂದ್ ಮಾಡಲಾಗಿದ್ದು ಕೂಡಲೇ ತೆರವುಗೊಳಿಸಬೇಕು, ಅಂಬೇಡ್ಕರ್ ಭವನವನ್ನು ನಿರ್ಮಿಸಬೇಕು, ಸಾರ್ವಜನಿಕರಿಗೆ ಹೈಟೆಕ್ ಶೌಚಾಲಯವನ್ನು ನಿರ್ಮಿಸಬೇಕು, ಅಕ್ರಮ ಮರಳು ಗಣಿಗಾರಿಕೆ ಸಂಪೂರ್ಣ ನಿಲ್ಲಿಸಬೇಕು, ನಾರಾಯಣ ನಗರ ಕ್ಯಾಂಪ್, ಲಕ್ಷ್ಮಿ ಕ್ಯಾಂಪ್ ಮತ್ತು ಬಸವೇಶ್ವರ ನಗರ (ಕ್ರಾಸ್) ಮನೆಗಳನ್ನು ಡಿಮ್ಯಾಂಡ್ ಪಟ್ಟಿಯಲ್ಲಿ ಸೇರಿಸಿ ಸಮಗ್ರ ಅಭಿವೃದ್ಧಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಕೂಡಲೇ ಈಡೇರಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಂ.ಗಂಗಾಧರ, ವೆಂಕಟೇಶ ನಾಯಕ, ಮಾರುತಿ ಜಿನ್ನಾಪುರ, ಬಸವರಾಜ ಬಳಗಾನೂರ, ಹುಲುಗಪ್ಪ, ಶಾಂತಮೂರ್ತಿ, ಮರಿಯಪ್ಪ, ದುರುಗಪ್ಪ, ಶರಣಪ್ಪ, ಶಿವಪ್ಪ ಹನುಮಂತ, ಹುಚಪ್ಪ, ಯಂಕಪ್ಪ ಸೇರಿದಂತೆ ಇನ್ನಿತರರಿದ್ದರು.

# ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ನಿಧಾನಕ್ಕೆ ಬಿ.ಗಣೇಕಲ್ ಗ್ರಾಮದಲ್ಲಿ ಶ್ರದ್ಧಾಂಜಲಿ



ನೈಜ್ಯ ದೆಸೆ ನ್ಯೂಸ್

**ಆರಕೇರಾ: ಬೆಂಗಳೂರಿನ ಸ್ಪರ್ಶ ಆಸ್ಪತ್ರೆಯಲ್ಲಿ ನಿಧನರಾದ ಹಿರಿಯ ಶಾಸಕ, ಮಾಜಿ ಸಚಿವರಾದ ಶಾಮನೂರು ಶಿವಶಂಕರಪ್ಪ ಅವರಿಗೆ ಬಿ.ಗಣೇಕಲ್ ಗ್ರಾಮದ ಈಶ್ವರ ದೇವಸ್ಥಾನದಲ್ಲಿ ಸೋಮವಾರ ಶ್ರದ್ಧಾಂಜಲಿ ಸಲ್ಲಿಸಿದರು.**

ಶಿವಣ್ಣ ಮಾಲೀ ಪಾಟೀಲ್ ಅವರು ಮಾತನಾಡಿ ಶಾಮನೂರು ಶಿವಶಂಕರಪ್ಪ ರವರು ರಾಜಕೀಯ ಅಜಾತಶತ್ರು, ದಾವಣಗೆರೆ ಜಿಲ್ಲೆಗೆ ಅಪಾರ ಕೊಡುಗೆಯನ್ನು ನೀಡಿದ್ದಾರೆ. ಅಖಿಲ ಭಾರತ ವೀರಶೈವ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷರಾಗಿದ್ದು, ಅನೇಕ ಶಿಕ್ಷಣ ಸಂಸ್ಥೆಗಳ ಕಟ್ಟಿ ಶಿಕ್ಷಣ ಕ್ರಾಂತಿಯನ್ನುಂಟುಮಾಡಿದ್ದಾರೆ. ಅವರು ಸಾವು ನಾಡಿಗೆ ದುಃಖವನ್ನು ಉಂಟು ಮಾಡಿದೆ ಎಂದರು. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಒಂದು ನಿಮಿಷ ಮೌನ ಆಚರಿಸಲಾಯಿತು.

ಊರಿನ ಹಿರಿಯರಾದ ಶಾಂತಪ್ಪ ಸಾಹುಕಾರ ಅಂಗಡಿ, ಮಹೇಶ್ ಗೌಡ ಮಾಲೀ ಪಾಟೀಲ್, ಶಿವುಕುಮಾರ ಮಾಲೀ ಪಾಟೀಲ್, ವಿರೇಶಗೌಡ ಮಾಲೀ ಪಾಟೀಲ್, ಬಸವರಾಜ ದಳವಾಯಿ, ಸಿದ್ದಪ್ಪ ದೊರೆ, ಪಂಚಾಕ್ಷರಯ್ಯ ತಾತ, ಸಿದ್ದಪ್ಪ ಕರಣಿಗಿ, ಶಿವಕುಮಾರ್ ದಂಡಗುಂಡ, ಮಲ್ಕಪ್ಪ ಸೂಗೂರು, ಶಾಂತಗುರು, ಶರಭಣ್ಣ, ಶರಣಪ್ಪ ಪಡಶೆಟ್ಟಿ, ಸುಧಾಕರ ಬಳೆ, ಶಿವಕುಮಾರ್ ಭಾವಣಿ, ಹನುಮಂತ್ರಾಯ ದೊರೆ, ಶಿವಾನಂದ ಪೂಜಾರಿ, ಸಿದ್ದಪ್ಪ ಪಾಟೀಲ್, ಹನುಮಂತ್ರಾಯ ಪಾಟೀಲ್, ಅಭೀಷೇಕ್ ಅದ್ರಿ ಸೇರಿದಂತೆ ಇನ್ನಿತರರಿದ್ದರು.

# ಮಸ್ಕಿ ಪುರಸಭೆ ನೂತನ ಅಧ್ಯಕ್ಷರಾಗಿ ಬಿಜೆಪಿ ಪಕ್ಷದ ಸುರೇಶ ಹರಸೂರು ಅವಿರೋಧ ಆಯ್ಕೆ



ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪುರಸಭೆಗೆ ಎರಡನೇ ಅವಧಿಗೆ ನೂತನ ಅಧ್ಯಕ್ಷರಾಗಿ ಸುರೇಶ ಹರಸೂರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ತಹಸೀಲ್ದಾರ್ ಹಾಗೂ ಚುನಾವಣೆ ಅಧಿಕಾರಿಯಾದ ಮಂಜುನಾಥ ಭೋಗಾವತಿ ಸೋಮವಾರ ತಿಳಿಸಿದರು.**

ಮಸ್ಕಿ ಪುರಸಭೆ ಕಚೇರಿಯಲ್ಲಿ ಚುನಾವಣಾ ಪ್ರಕ್ರಿಯೆ ನಡೆಯಿತು. ಮಸ್ಕಿ ಪುರಸಭೆ ಅಧ್ಯಕ್ಷರಾಗಿದ್ದ ಮಲ್ಲಯ್ಯ ಅಂಬಾಡಿ ಕೆಲ ದಿನಗಳ ಹಿಂದೆ ಅಧ್ಯಕ್ಷ ಸ್ಥಾನಕ್ಕೆ ರಾಜಿನಾಮೆ ನೀಡಿದ್ದರಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ 16ನೇ ವಾರ್ಡಿನ ಸದಸ್ಯ ಸುರೇಶ ಹರಸೂರು ಒಬ್ಬರೇ ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾ ಅಧಿಕಾರಿ ತಿಳಿಸಿದರು.

ವಿಜಯೋತ್ಸವ: ಪುರಸಭೆಗೆ ನೂತನ ಅಧ್ಯಕ್ಷರಾಗಿ ಸುರೇಶ ಹರಸೂರು ಘೋಷಣೆಯಾಗುತ್ತಿದ್ದಂತೆ ಪಟ್ಟಣದ ಹಳೇ ಬಸ್ ನಿಲ್ದಾಣದಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವವನ್ನು ಆದ್ದೂರಿಯಾಗಿ ಆಚರಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ರವಿಗೌಡ ಪೊಲೀಸ್ ಪಾಟೀಲ್, ಚೇತನ ಪಾಟೀಲ್, ಮಲ್ಲಿಕಾರ್ಜುನ ಬ್ಯಾಳಿ, ಭರತ, ಸೇರಿದಂತೆ ಇನ್ನಿತರ ಪುರಸಭೆ ಸದಸ್ಯರು ಹಾಗೂ ಮುಖಂಡರಾದ ಸಿದ್ದಣ್ಣ ಹೂವಿನಭಾವಿ, ಬಿ.ಹೆಚ್.ದಿವಟರ್, ಮೌನೇಶ ನಾಯಕ, ಸೂಗಣ್ಣ ಬಾಳೆಕಾಯಿ, ಪ್ರಸನ್ನ ಪಾಟೀಲ್, ಬಸವರಾಜ ಬುಕ್ಕಣ್ಣ, ಮಸೂದ್‌ಪಾಷ, ಯಲ್ಲೋಜಿರಾವ್ ಕೋರೆಕಾರ್ ಸೇರಿದಂತೆ ಪುರಸಭೆ ಸದಸ್ಯರು ಮತ್ತು ಬಿಜೆಪಿ ಪಕ್ಷದ ನೂರಾರು ಕಾರ್ಯಕರ್ತರಿದ್ದರು.

# ಮಕ್ಕಳ ಪ್ರತಿಭೆ ಪ್ರದರ್ಶನಕ್ಕೆ ಕಾರಂಜಿ ಉತ್ತಮ ವೇದಿಕೆ



ನೈಜ್ಯ ದೆಸೆ ನ್ಯೂಸ್

**ಕವಿತಾಳ: 'ಮಕ್ಕಳ ಪ್ರತಿಭೆ ಅನಾವರಣ ಮತ್ತು ಪ್ರದರ್ಶನಕ್ಕೆ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಉತ್ತಮ ವೇದಿಕೆಯಾಗಿದೆ' ಎಂದು ಮಸ್ಕಿ ಶಾಸಕ ಆರ್. ಬಸನಗೌಡ ತುರವಿಹಾಳ ಹೇಳಿದರು. ಅವರು ಇಂದು ಸಮೀಪದ ಹಾಲಾಪುರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ವಲಯ ಮಟ್ಟದಪ್ರತಿಭಾ ಕಾರಂಜಿ ಹಾಗೂ ಕಲೋತ್ಸವನ್ನು ಉದ್ಘಾಟಿಸಿ ಮಾತನಾಡಿದರು.**

'ಪ್ರತಿಭಾ ಕಾರಂಜಿಯು ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳಿಗೆ ಒಂದು ಉತ್ತಮ ಅವಕಾಶ, ಮಕ್ಕಳು ಪ್ರತಿಭಾ ಕಾರಂಜಿಯಲ್ಲಿ ಪಾಲ್ಗೊಳುವ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು' ಎಂದು ಹೇಳಿದರು. ಚಿತ್ರಕಲೆ, ಮಿಮಿಕ್ರಿ, ರಸಪ್ರಶ್ನೆ, ರಂಗೋಲಿ ಬಿಡಿಸುವುದು, ಭರತನಾಟ್ಯ, ಪ್ರಬಂಧ,ದೇಶಭಕ್ತಿಗೀತೆ, ಛದ್ಮವೇಶ,ಭರತನಾಟ್ಯ ಸೇರಿದಂತೆ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿದುವ ಮೂಲಕ ಮಕ್ಕಳು ಸಂಭ್ರಮಿಸಿದರು. ಕಾರ್ಯಕ್ರಮದ ಸಾನಿಧ್ಯವನ್ನು ಜಂಗಮರಹಳ್ಳಿಯ ಚಂದ್ರಮೌಳೇಶ್ವರ ತಾತ ಮತ್ತು ದಂಡಗುಂಡಪ್ಪ ತಾತನವರು ವಹಿಸಿದ್ದರು.

ಮುಖಂಡರಾದ ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ, ಜಗದೀಶ್ಚಂದ್ರ ಸ್ವಾಮಿ, ಮಂಜುನಾಥಪಾಟೀಲ್, ಚನ್ನವೀರಜೋಗಿನ್, ಅರವಿಂದ ಪಾಟೀಲ್, ವೆಂಕಟರಡ್ಡಿಗೌಡ, ಬಲವಂತರಾಯ ವಟಗಲ್ ಮತ್ತಿತರರು ಉಪಸ್ಥಿತರಿದ್ದರು.

# ಅಲಬನೂರು ಗ್ರಾಮ ಪಂಚಾಯಿತಿಯಲ್ಲಿ ರೋಜ್ ಗಾರ ದಿವಸ ಆಚರಣೆ



ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಿಂಧನೂರು ತಾಲೂಕಿನ ಅಲಬನೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಕನ್ನಾರಿ ಗ್ರಾಮದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಗ್ರಾಮದ ನರೇಗಾ ಯೋಜನೆಯ ಕೂಲಿ ಕಾರ್ಮಿಕರೊಂದಿಗೆ ರೋಜ್ ಗಾರ್ ದಿವಸ ಆಚರಣೆ ಜೊತೆಗೆ ಎನ್.ಎಮ್.ಎಮ್.ಎಸ್. ತಂತ್ರಾಂಶದಲ್ಲಿ ಕಡ್ಡಾಯವಾಗಿ ಎರಡು ಬಾರಿ ಹಾಜುರಾತಿ ದಾಖಲಿಸುವ ಕುರಿತು ಮಾಹಿತಿ ನೀಡಲಾಯಿತು.**

ನರೇಗಾ ಯೋಜನೆಯಡಿ ದಿನದ ಕೂಲಿ ದರವನ್ನು 370ಕ್ಕೆ ಹೆಚ್ಚಳ ಮಾಡಿ, ಅದೇಶ ಹೊರಡಿಸಿ ಸರ್ಕಾರ ಕೂಲಿಕಾರರಿಗೆ ಸಿಹಿ ಸುದ್ದಿ ನೀಡಿದೆ. ಸ್ತ್ರೀ ಚೇತನ ಅಭಿಯಾನದಡಿ ಗಂಡು ಮತ್ತು ಹೆಣ್ಣಿಗೆ 370 ರೂ. ಸಮಾನ ಕೂಲಿ ಇದ್ದು, ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೂ ಒಂದು ಆರ್ಥಿಕ ವರ್ಷದಲ್ಲಿ 100 ದಿನ ಕೆಲಸ ಕೊಡಲಾಗುತ್ತದೆ. ಒಂದು ಕುಟುಂಬ ವರ್ಷದಲ್ಲಿ ನೂರು ದಿನ ಕೆಲಸ ಮಾಡಿದರೆ, 37 ಸಾವಿರ ರೂ.ಗಳ ಕೂಲಿ ಹಣ ಪಡೆದುಕೊಳ್ಳಬಹುದಾಗಿದೆ.

ಇದೇ ವೇಳೆ ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆಯ ಕುರಿತು ಮಾಹಿತಿ ನೀಡಲಾಯಿತು, ಸಾಮಾಜಿಕ ಭದ್ರತೆ ಕಲ್ಪಿಸಲು ಯೋಜನೆಯಡಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರು ಹಾಗೂ ಗರ್ಭಿಣಿಯರಿಗೆ ಶೇ.50 ರಷ್ಟು ಕೆಲಸ ಮಾಡಿದರೂ ಪೂರ್ತಿ ಪ್ರಮಾಣದ ಕೂಲಿ ನೀಡಲಾಗುತ್ತದೆ.

3 ವರ್ಷದೊಳಗಿನ ಮಕ್ಕಳನ್ನು ಶಿಶು ಪಾಲನಾ ಕೇಂದ್ರದಲ್ಲಿ ಬಿಟ್ಟು ಬರಬೇಕು. 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಕರೆದುಕೊಂಡು ಬರಬಾರದೆಂಬ ಮಾಹಿತಿ ನೀಡಲಾಯಿತು. ಎನ್.ಎಂ.ಎಂ.ಎಸ್ ಹಾಜರಾತಿಯನ್ನು ಎರಡು ಬಾರಿ ಕಡ್ಡಾಯವಾಗಿ ತೆಗೆದುಕೊಳ್ಳಲು ಸಿಬ್ಬಂದಿಗಳಿಗೆ ತಿಳಿಸಿ, ಈ ಸಂದರ್ಭದಲ್ಲಿ ಕೂಲಿ ಕಾರ್ಮಿಕರಿಂದ 317 ಕೂಲಿಕಾರರು ಹಾಜರಿದ್ದರು, ಜನರಿಗೆ ಕೆಲಸ ಮುಗಿದ ಕೂಡಲೇ ನಮೂನೆ 6ನ್ನು ಕೊಟ್ಟು ಮತ್ತೆ ಕೆಲಸ ಕೊಡುತ್ತೇವೆ ಎಂದು ತಿಳಿಸಿ, ಇಕೆವೈಸಿ ಮಾಹಿತಿ ಪಡೆದು ಶೇ. 93 ರಷ್ಟು ಈಗಾಗಲೇ ಪ್ರಗತಿ ಸಾಧಿಸಿದ್ದು, ಉಳಿದಂತೆ ತಮ್ಮ ಗುರಿಗನುಗುಣವಾಗಿ ಪ್ರಗತಿ ಸಾಧಿಸಿ, ಬಾಕಿ ಉಳಿಯಲು ಕಾರಣಗಳನ್ನು ಪ್ರತ್ಯೇಕವಾಗಿ ವಿಂಗಡಿಸಿ ವರದಿ ನೀಡಲು ತಿಳಿಸಲಾಯಿತು. ಈ ಸಂದರ್ಭದಲ್ಲಿ: ಥಾಮಸ್ ತಾಲೂಕು ಐಇಸಿ ಸಂಯೋಜಕರು, ರಾಜೀವ್ ಗಾಂಧಿ ಫೆಲೋ ಧನ್ಯ ಪ್ರಭು, ಗ್ರಾಮ ಪಂಚಾಯತಿ ಡಿ.ಇ.ಓ, ಶರಣಪ್ಪ ಹಾಗೂ ಕೂಲಿ ಕಾರ್ಮಿಕರು ಹಾಜರಿದ್ದರು.

## ನೇಮಕಾತಿ ಪ್ರಕಟಣೆ

ಅಂಗನವಾಡಿ ಕಾರ್ಯಕರ್ತೆ,ಸಹಾಯಕಿಯರ ಹುದ್ದೆ ಸಿಂಧನೂರು,ತುರ್ವಿಹಾಳ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಅಂಗನವಾಡಿ ಕೇಂದ್ರ ಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಉಮಲೂಟಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಬುಕ್ಕನಹಟ್ಟಿ–2 ಅಂಗನವಾಡಿ ಕೇಂದ್ರದ ಅಂಗನವಾಡಿ ಕಾರ್ಯಕರ್ತೆ 01 ಹುದ್ದೆ ಮೀಸಲಾತಿ ಇತರೆ ಇದ್ದು ಮತ್ತು ಗೊರಲೋಟಿ ಅಂಗನವಾಡಿ ಕೇಂದ್ರದ ಅಂಗನವಾಡಿ ಕಾರ್ಯಕರ್ತೆ 01 ಹುದ್ದೆ ಮೀಸಲಾತಿ ಪರಿಶಿಷ್ಟ ಪಂಗಡ ಇದ್ದು ಹಾಗೂ ಬುಕ್ಕನಹಟ್ಟಿ –1 ಅಂಗನವಾಡಿ ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಪರಿಶಿಷ್ಟ ಜಾತಿ ಇದ್ದು ಹಾಗೂ ಮುದೇನೂರು ಕ್ಯಾಂಪ್ ಅಂಗನವಾಡಿ ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಪರಿಶಿಷ್ಟ ಪಂಗಡ ಇದ್ದು ತಿಡಿಗೋಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ (ಕುರುಕುಂದ) ಗುಡದಮ್ಮ ಕ್ಯಾಂಪ್ ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆಗೆ ಮೀಸಲಾತಿ ಪ.ಜಾತಿ ಇದ್ದು. ಮತ್ತು ನೀಡಿಗೋಳ ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆಗೆ ಮೀಸಲಾತಿ ಇತರೆ ಇದ್ದು. ಗುಂಜಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಗುಂಜಳ್ಳಿ –1 ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಇತರೆ. ಬೂತಲದಿನ್ನಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ತಗ್ಗಿನ ಕ್ಯಾಂಪ್ ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಇತರೆ ಇದ್ದು. ಜಾಲಿಹಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕೆ ಹಂಚಿನಾಳ – 1 ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಪರಿಶಿಷ್ಟ ಜಾತಿ ಇದ್ದು.ಗುಡದೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಮೆರನಾಳ –1 ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಇತರೆ ಹಾಗೂ ಗೋನಾಳ್ –1 ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಇತರೆ.ಗೊರೇಬಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕೆ ಹಂಚಿನಾಳ ಕ್ಯಾಂಪ್ –6 ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಇತರೆ. ಗುಂಡ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಗುಂಡ –1 ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಪರಿಶಿಷ್ಟ ಜಾತಿ ಮತ್ತು ಗುಂಡ –3 ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಇತರೆ ಮತ್ತು ಬೋಗಾಪೂರ ಕ್ಯಾಂಪ್ ಕೇಂದ್ರದ ಅಂಗನವಾಡಿ ಸಹಾಯಕಿ 01 ಹುದ್ದೆ ಮೀಸಲಾತಿ ಪರಿಶಿಷ್ಟ ಪಂಗಡ ಇದ್ದು. ತುರ್ವಿಹಾಳ ಶಿಶು ಅಭಿವೃದ್ಧಿ ಯೋಜನೆ ಯಡಿ ಅಂಗನವಾಡಿ ಕೇಂದ್ರಗಳಲ್ಲಿರುವ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ,ಸಹಾಯಕಿಯರ ಹುದ್ದೆಗಳಿಗೆ ಆನ್ ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದ್ದು 08–12– 2025 ರಿಂದ 07–01–2026 ರವರೆಗೆ ಕಾಲಾವಕಾಶ ನೀಡಲಾಗಿದೆ ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿಯೋಜನಾಧಿಕಾರಿಗಳ ಕಛೇರಿ ಸಂಪರ್ಕಿಸಿ ಎಂದು ತಿಳಿಸಿದರು.

# ಮಾನವಿಯಲ್ಲಿ ಶಿಶಿಕ್ಷ ಮೇಳಕ್ಕೆ ಚಾಲನೆ ವಿದ್ಯಾರ್ಥಿಗಳು ವಿವಿಧ ಕೌಶಲ್ಯಗಳನ್ನು ಮೈಗೂಡಿಸಿಕೊಳ್ಳಿ: ಚಂದ್ರಶೇಖರ ದೊಡ್ಡಮನಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 15 (ಕರ್ನಾಟಕ ವಾರ್ತೆ): ವಿದ್ಯಾರ್ಥಿಗಳಿಗೆ ಕೌಶಲ್ಯ ಅತ್ಯವಶ್ಯಕವಾಗಿದೆ. ಕೌಶಲ್ಯ ಕುರಿತು ಸರ್ಕಾರವು ಮನಗಂಡು ಪ್ರೌಢ ಶಾಲಾ ಹಂತದಲ್ಲಿಯೇ ಎನ್‌ಎಸ್‌ಕ್ಯೂಎಫ್‌ನ್ನು ಪರಿಚಯಿಸಲಾಗಿದ್ದು, ವಿದ್ಯಾರ್ಥಿಗಳು ಸರ್ಕಾರಿ ನೌಕರಿಯನ್ನೇ ಅವಲಂಬಿಸದೇ ವಿವಿಧ ಕೌಶಲಗಳನ್ನು ಮೈಗೂಡಿಸಿಕೊಂಡು ಸ್ವಾವಲಂಬಿಗಳಾಗಿ ಬದುಕಬೇಕೆಂದು ಮಾನವಿ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಚಂದ್ರಶೇಖರ ದೊಡ್ಡಮನಿ ಅವರು ಹೇಳಿದರು.**

ಇತ್ತೀಚಿಗೆ ಜಿಲ್ಲೆಯ ಮಾನವಿ ಪಟ್ಟಣದ ಬಸವ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ವತಿಯಿಂದ 2025–26ನೇ ಪಿಎಮ್–ಎನ್‌ಎಎಮ್ ಯೋಜನೆಯಡಿಯಲ್ಲಿ ಶಿಶಿಕ್ಷ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ವಿಶೇಷವಾಗಿ ಗ್ರಾಮೀಣ ಭಾಗದ ಬಡ, ಮದ್ಯಮ ವರ್ಗದ ವಿದ್ಯಾರ್ಥಿಗಳು ಐಟಿಐ ನಂತಹ ವೃತ್ತಿ ಶಿಕ್ಷಣದ ಕಡೆ ಆಸಕ್ತಿ ವಹಿಸುತ್ತಿರುವುದು ಉತ್ತಮ




ಬೆಳವಣಿಗೆಯಾಗಿದ್ದು, ಅವರ ಆರ್ಥಿಕ ಸ್ಥಿತಿಗತಿಯ ಸುಧಾರಣೆಗೆ ಹಾಗೂ ಉತ್ತಮ ಜೀವನ ನಿರ್ವಹಣೆಗೆ ಅನುಕೂಲಕರವಾಗಿದೆ ಎಂದರು.

ಈ ವೇಳೆ ತಾಲೂಕು ನೌಕರರ ಸಂಘದ ಅಧ್ಯಕ್ಷರಾದ ಸುರೇಶ ಕುಮಾರ ಕುರ್ಡಿ ಅವರು ಮಾತನಾಡಿ, ನಾವು ವಿದ್ಯಾರ್ಥಿಗಳಾಗಿದ್ದಾಗ ಜಿಲ್ಲೆಗೆ ಕೇವಲ ಒಂದೇ ಒಂದು ಸರ್ಕಾರಿ ಐಟಿಐ ಕಾಲೇಜು ಇತ್ತು, ಇಂದು ಸರ್ಕಾರ ಪ್ರತಿ ತಾಲೂಕು ಮತ್ತು ಗ್ರಾಮೀಣ ಭಾಗದಲ್ಲಿಯೂ ಕೂಡ ಸರ್ಕಾರಿ ಐಟಿಐ ಕಾಲೇಜುಗಳನ್ನು ಪ್ರಾರಂಬಿಸುವ ಮೂಲಕ ಗ್ರಾಮೀಣ ಭಾಗದ ಬಡ ಮದ್ಯಮ ವರ್ಗಗಳಿಗೆ ಹಾಗೂ ಎಂಬಿಬಿಎಸ್ ಮತ್ತು ಇಂಜಿನಿಯರಿಂಗ್ ನಂತಹ ಉನ್ನತ ಶಿಕ್ಷಣ ಪಡೆಯಲು ಸಾದ್ಯವಾಗಿದೆ. ವಿದ್ಯಾರ್ಥಿಗಳಿಗೆ ಐಟಿಐ ಜೀವನ ಸಂಜೀವಿನಿಯಾಗಿದೆ ಎಂದರು.

ಶಿಶಿಕ್ಷ ಮೇಳದಲ್ಲಿ ಜೆಎಸ್‌ಡಬ್ಲ್ಯೂ ತೋರಣಗಲ್ಲು, ಹೋಂಡಾ ಕಂಪನಿ ಬೆಂಗಳೂರು, ಇ2ಇ ಕನ್ಸಲ್ಟೆನ್ಸಿ ರಾಯಚೂರು ಹಾಗೂ ಇತರ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ಜಿಲ್ಲೆಯ ವಿವಿಧ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಐಟಿಐ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ತರಬೇತಿದಾರರು ಮತ್ತು ಪಿಯುಸಿ ಹಾಗೂ ಪದವಿಯಲ್ಲಿ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಮೇಳದಲ್ಲಿ ಭಾಗವಹಿಸಿದ್ದರು.

40ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ನೇಮಕಾತಿ ಪತ್ರ: ಪಿಎಮ್‌ಎನ್‌ಎಎಮ್ ಯೋಜನೆಯಡಿಯಲ್ಲಿ ಶಿಶಿಕ್ಷ ಮೇಳವನ್ನು ಹಮ್ಮಿಕೊಳ್ಳಲಾಗಿತ್ತು. ಮೇಳಕ್ಕೆ ಆಗಮಿಸಿದ್ದ ವಿವಿಧ ಕಂಪನಿಗಳ ಪ್ರತಿನಿಧಿಗಳು ಭಾಗವಹಿಸಿದರು. ಮೇಳದಲ್ಲಿ ಸುಮಾರು 60 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, ಸುಮಾರು 40ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸ್ಥಳದಲ್ಲಿಯೇ ನೇಮಕಾತಿ ಪತ್ರವನ್ನು ನೀಡಲಾಯಿತು. ಇದೇ ಸಂದರ್ಭದಲ್ಲಿ ಮಾನವಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ರುದ್ರಗೌಡ ಮಾಲಿಪಾಟೀಲ್, ಬಸವ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ತಿಪ್ಪಣ್ಣ ಹೊಸಮನಿ, ತಾಲೂಕು ನೌಕರರ ಸಂಘದ ನಿರ್ದೇಶಕರಾದ ಮುಕ್ಕಣ್ಣ .ಕೆ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸಿಬ್ಬಂದಿಗಳಾದ ಗಂಗಪ್ಪ, ಶರಣಪ್ಪ ಹಿಪ್ಪಲದಿನ್ನಿ, ನಾಗರಾಜ ಪಿ. ಸೇರಿದಂತೆ ಜಿಲ್ಲೆಯ ವಿವಿಧ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಇದ್ದರು.

# ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಬಸ್ ಸೌಕರ್ಯ ಕಲ್ಪಿಸಿಕೊಡಲು ವಾಲ್ಮೀಕಿ ಸಮುದಾಯದಿಂದ ಮನವಿ



ನೈಜ್ಯ ದೆಸೆ ನ್ಯೂಸ್

**ನಗರದ ಶಿವಜ್ಯೋತಿ ನಗರದ ರೈಲ್ವೆ ಮಾರ್ಗವಾಗಿ ಬರುವ ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸುವಂತೆ ವಾಲ್ಮೀಕಿ ಸಮುದಾಯದ ಮುಖಂಡರಿಂದ ಬಸ್ ಡಿಪೋ ಮ್ಯಾನೇಜರ್ ಗೆ ಮನವಿ ಪತ್ರ ಸಲ್ಲಿಸಲಾಯಿತು.**

ನಗರದ ಹೊರವಲಯದಲ್ಲಿ ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಿರ್ಮಿಸಲಾಗಿರುವ ವಿದ್ಯಾರ್ಥಿನಿ ನಿಲಯಕ್ಕೆ ಬಸ್ ವ್ಯವಸ್ಥೆಯಿಲ್ಲದೆ, ವಿದ್ಯಾರ್ಥಿಗಳು ಸುಮಾರು 5 ಕಿ.ಮೀ ನಡೆದುಕೊಂಡೇ ಕಾಲೇಜಿಗೆ ಹೋಗಬೇಕಿದೆ. ವಾರ್ಡ್ ನಂ.19ರ ಶಿವಜ್ಯೋತಿ ನಗರದಲ್ಲಿರುವ ವಸತಿ ನಿಲಯದಲ್ಲಿ 228 ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರು, 75 ವ್ಯಾಸಂಗ ಮಾಡುತ್ತಿದ್ದು,

ಈ ವಸತಿ ನಿಲಯಗಳು ನಿರ್ಜನ ಪ್ರದೇಶದಲ್ಲಿರುವ ಕಾರಣ ವಸತಿ ನಿಲಯದಿಂದ ಕುಷ್ಟಗಿ ರಸ್ತೆ ಸರಕಾರಿ ಮಹಾವಿದ್ಯಾಲಯಕ್ಕೆ 5 ಕಿ.ಮೀ ದೂರ ವಿದ್ಯಾರ್ಥಿನಿಯರು ಪ್ರತಿ ನಿತ್ಯವೂ ನಡೆದುಕೊಂಡೆ ಹೋಗುತ್ತಿದ್ದಾರೆ. ಕಾಲೇಜಿಗೆ ತೆರಳಲು ವಿದ್ಯಾರ್ಥಿ ಗಳಿಗೆ ಬಸ್ ಸೌಕರ್ಯ ಕಲ್ಪಿಸಿಕೊಡುವ ಬಗ್ಗೆ ಸಾರಿಗೆ ನಿಗಮದ ಘಟಕ ನಿಯಂತ್ರಣಾಧಿಕಾರಿಗಳನ್ನು ಭೇಟಿ ಮಾಡಿ ಈಗಾಗಲೇ ಮನವಿ ಪತ್ರ ಸಲ್ಲಿಸಿದ್ದರು ಕೂಡ ಗಮನಹರಿಸಿಲ್ಲ. ಕೂಡಲೇ ಸಾರಿಗೆ ನಿಗಮದ ಅಧಿಕಾರಿಗಳು ಪರಿಶೀಲಿಸಿ ಬಸ್ ಸಂಚಾರ ಸೌಕರ್ಯ ಕಲ್ಪಿಸಿಕೊಡಬೇಕು ಒಂದು ವೇಳೆ ಯಾವುದೇ ಅಹಿತಕರ ಘಟನೆ ಜರುಗಿದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ನೇರಹೊಣೆಗಾರರು, ಈ ಮನವಿಗೆ ಸ್ಪಂದಿಸಿದೆ ಹೋದರೆ ಮುಂದಿನ ದಿನಗಳಲ್ಲಿ ವಿದ್ಯಾರ್ಥಿನಿಯರ ಜೊತೆಗೆ ಸಾರಿಗೆ ಇಲಾಖೆ ವಿರುದ್ಧ ಪ್ರತಿಭಟನೆ ಮಾಡಬೇಕಾಗುತ್ತದೆಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಈ ಸಂಧರ್ಭದಲ್ಲಿ: ವಿಶ್ವನಾಥ ಹೆಚ್.ನಾಯಕ ಗೋನಾವರ, ಕುಪೇಂದ್ರನಾಯಕ ಹೆಡಗಿನಾಳ, ವೆಂಕಟೇಶ ನಾಯಕ ಬೂತಲದಿನ್ನಿ, ಮಲ್ಲಯ್ಯ ನಾಯಕ ವಕೀಲರು, ಫಕೀರಪ್ಪ ನಾಯಕ ರಾಮತ್ನಾಳ, ಸೇರಿದಂತೆ ಇತರರು ಇದ್ದರು.

## ವಿಜ್ಞಾನ ವಿಷಯ ಉಪನ್ಯಾಸ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಎಸ್.ಎಸ್ ವಿದ್ಯಾಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಸಂಗಮೇಶ್ವರ ಪ್ರೌಢಶಾಲೆಯ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಎಸ್.ಎಸ್.ಎಲ್. ಸಿ. ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸುವ ತಂತ್ರಗಳನ್ನು ತಿಳಿಸಿಕೊಡುವ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಸೋಮವಾರ ಹಮ್ಮಿಕೊಳ್ಳಲಾಯಿತು.**



ಬ.ಸಾಲವಾಡಗಿ ಸರಕಾರಿ ಪ್ರೌಢಶಾಲೆಯ ವಿಜ್ಞಾನ ವಿಷಯದ ಶಿಕ್ಷಕಿ ಸುವರ್ಣ ಮಠ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಪ್ರೌಢಶಾಲೆಯ ಹತ್ತನೇ ತರಗತಿಯ ವಿದ್ಯಾರ್ಥಿಗಳಿಗೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಗಳಿಸುವ ತಂತ್ರಗಳನ್ನು ತಿಳಿಸಿಕೊಡುವುದರ ಜೊತೆಗೆ ವಿಜ್ಞಾನದ ಅನೇಕ ಸೂತ್ರಗಳನ್ನು ಹೇಳಿಕೊಟ್ಟರು. ಇದೇ ಸಂದರ್ಭದಲ್ಲಿ ಅನಿರೀಕ್ಷಿತವಾಗಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಬಿ.ಎಸ್.ಸಾವಳಗಿ ಮುದ್ದೇಬಿಹಾಳ ಮತ್ತು ಸಿ.ಆರ್.ಪಿ.ಬಾಲಾಜಿ ವಿಜಾಪೂರ ಭೇಟಿ ನೀಡಿ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಎಲ್.ಬಿ.ಎ.ಎಫ್.ಎಲ್. ಎನ್. 29 ಅಂಶಗಳು.ಎನ್.ಎಮ್.ಎಮ್.ಎಸ್ ಪರೀಕ್ಷೆ ಹಾಗೂ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆ ಕುರಿತು ಸಾಕಷ್ಟು ಮಾಹಿತಿ ವಿವರಿಸಿದರು.ಉಪನ್ಯಾಸ ನೀಡಿದ ಸುವರ್ಣಾ ಮಠ ಇವರಿಗೆ ಸಂಸ್ಥೆ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಈ ಸಮಯದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಕಿರಣ ಎಚ್.ಪಾಟೀಲ,ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಅಶೋಕ. ಕಟ್ಟಿ, ಹತ್ತನೇ ತರಗತಿ ವರ್ಗ ಶಿಕ್ಷಕ ಎಸ್.ಸಿ.ಗುಡಗುಂಟಿ, ಹಿರಿಯ ಶಿಕ್ಷಕ ಬಿ.ಆಯ್.ಹಿರೇಹೊಳಿ, ಎಸ್.ವಿ.ಜಾಮಗೊಂಡಿ, ಎಚ.ಬಿ.ಪಾಟೀಲ, ಎಮ್.ಎಸ್.ರಾಯಗೊಂಡ, ಯು.ಎಚ. ಗಟನೂರ, ಎಸ್.ಬಿ.ಸಾಸನೂರ,ಕವಿತಾ ತೆಗ್ಗಿನಮಠ, ಕೆ. ಎನ್.ನಾಲತವಾಡ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದುಗನೂರಿನ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಕೃಷಿ ವಿಜ್ಞಾನಿಗಳ ತಂಡ ಭೇಟಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 15 (ಕರ್ನಾಟಕ ವಾರ್ತೆ): ರಾಯಚೂರು ತಾಲ್ಲೂಕಿನ ದುಗನೂರಿನ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇತ್ತೀಚಿಗೆ ಕೃಷಿ ವಿಜ್ಞಾನಿಗಳ ತಂಡ ಭೇಟಿ ನೀಡಿ, ಮಕ್ಕಳಿಗೆ ಪೌಷ್ಟಿಕ ತೋಟದ ಮಹತ್ವದ ಕುರಿತು ಬೇಸಾಯಿ ಶಾಸ್ತ್ರ ವಿಭಾಗದ ವಿಜ್ಞಾನಿ ಡಾ.ಮಲ್ಲರೆಡ್ಡಿ ಅವರು ತಿಳಿಸಿದರು.**

ಮನುಷ್ಯನ ಜೀವನಕ್ಕೆ ಬಹಳ ಮುಖ್ಯವಾದುದ್ದು, ಆರೋಗ್ಯ ಇದರ ರಕ್ಷಣೆ ಪೌಷ್ಟಿಕ ಆಹಾರದಿಂದ ಸಾದ್ಯ ಹಾಗಾಗಿ ಪೌಷ್ಟಿಕ ತೋಟ ಬೆಳಸುವುದು ಬಹಳ ಪ್ರಮುಖವಾಗಿದೆ. ಈ ವೇಳೆ ಹಿರಿಯ ಕೃಷಿ ವಿಜ್ಞಾನಿಗಳಾದ




ಡಾ.ಹೇಮಲತಾ ಅವರು ಮಕ್ಕಳಿಗೆ ತೋಟದ ತಯಾರಿ ಹೇಗೆ ಮಾಡಿಕೊಳ್ಳಬೇಕು ಎಂದು ಪ್ರಾತ್ಯಕ್ಷೆಯನ್ನು ಮಾಡಿ ಮಾರ್ಗದರ್ಶನ ಮಾಡಿದರು. ಈ ವೇಳೆ ಕೀಟಶಾಸ್ತ್ರದ ವಿಜ್ಞಾನಿಗಳಾದ ಡಾ.ಶ್ರೀವಾಣಿ ಅವರು ಕೀಟಗಳ ಕುರಿತು ಅದರಲ್ಲಿ ವಿಶೇಷವಾಗಿ ಜೇನಿನ ಹುಳುಗಳ ಮಾಹಿತಿಯನ್ನು ನೀಡಿ ಮಕ್ಕಳಿಗೆ, ಮಕರಂದ ಎಲ್ಲಿ ಇರುತ್ತೆ, ಜೇನು ನೊಣ ಮಕರಂದವನ್ನು ಯಾವ ವಿಧದಲ್ಲಿ ಹುಡುಕುತ್ತವೆ ಎಂದು ಚಟುವಟಿಕೆ ಮೂಲಕ ವಿವರಿಸಿದರು.

ಈ ವೇಳೆ ಆಹಾರ ಸಂಸ್ಕರಣೆ ವಿಭಾಗದ ವಿಜ್ಞಾನಿಗಳಾದ ಡಾ.ವೀಣಾ ಅವರು ಶುದ್ಧ ಮತ್ತು ಸಂಸ್ಕರಣೆಯ ಆಹಾರ ನಿತ್ಯ ಜೀವನಕ್ಕೆ ಬೇಕು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯಗುರುಗಳಾದ ಗಫೂರ್, ಸಹಶಿಕ್ಷಕರಾದ ಚಂದ್ರಶೇಖರ್ ನಾಯ್ಕ್. ಸಂಪತರಾಜ್,ಪುಲಿ ಅಂಜಿನೇಯ್ಯ, ಮಲ್ಲೇಶ, ನರೇಶ ಕುಮಾರ್, ನವೀನ್ ಕುಮಾತ್, ಮಹೇಶ ಕುಮಾರ್ ಸೇರಿದಂತೆ ಇತರರು ಇದ್ದರು.


# ಮಕ್ಕಳ ಶಿಕ್ಷಣಕ್ಕೆ ಸ್ಫೂರ್ತಿ: ಧನಂಜಯ

ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ಮಕ್ಕಳ ಅಭಿಪ್ರಾಯಕ್ಕೆ ಅವಕಾಶ ಮತ್ತು ಮನ್ನಣೆ ನೀಡಿ ಅವರು ಕೇಳುವ ಪ್ರತಿಯೊಂದು ಸಮಸ್ಯೆಗಳಿಗೆ ಸ್ಪಂದಿಸಿ ಮಕ್ಕಳ ಕಲಿಕೆಗೆ ಉತ್ತೇಜನ ಹಾಗೂ ಕಲಿಕೆಗೆ ಪೂರಕ ವಾತಾವರಣವನ್ನ ಕಲ್ಪಿಸುವ ಪ್ರಮುಖ ಅಂಶವೇ ಈ ಗ್ರಾಮ ಸಭೆಯ ಉದ್ದೇಶವಾಗಿದೆ ಎಂದು ಮುಷ್ಟೂರು ಗ್ರಾಮ ಪಂಚಾಯತ ಅಧ್ಯಕ್ಷ ಧನಂಜಯ ಶಿವಂಗಿ ಹೇಳಿದರು.**

ಅವರು ಗ್ರಾಮ ಪಂಚಾಯತ ಕಾರ್ಯಾಲಯ ಮುಷ್ಟೂರು ಹಾಗೂ ಡಾನ್ ಬೋಸ್ಕೊ ಸಮಾಜ ಸೇವಾ ಸಂಸ್ಥೆ ಹಾಗೂ ಸರ್ಕಾರಿ ಪ್ರೌಢ ಶಾಲೆ ಶಿವಂಗಿಯಲ್ಲಿ ಆಯೋಜಿಸಲಾಗಿದ್ದ ಹಕ್ಕುಗಳ ಗ್ರಾಮ ಸಭೆ ಉದ್ಘಾಟಿಸಿ ಮಾತನಾಡಿ ಮಕ್ಕಳ ಕಲಿಕೆ ಮತ್ತು ಸಮಸ್ಯೆಗಳನ್ನು ಗುರುತಿಸಿ ಅವರು ಹೇಳುವ ಪ್ರತಿಯೊಂದು ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹಾರವನ್ನ ಒದಗಿಸಿಕೊಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ತದನಂತರ ಸಂಪನ್ಮೂಲ ವ್ಯಕ್ತಿ ಸಿದ್ದಲಿಂಗಪ್ಪ ಕಾಕರಗಲ್ ಮಾತನಾಡಿ ಪ್ರಸ್ತುತ ಶೈಕ್ಷಣಿಕ ಅವಧಿಯಲ್ಲಿ ಮಕ್ಕಳ ಗುಣಾತ್ಮಕ ಶಿಕ್ಷಣದ ಕಡೆ ಗಮನಹರಿಸಿ ಯಾವುದೇ ಮಗು ಶಾಲೆಯಿಂದ ಹೊರಗೊಳಿಯದನೆ ಮತ್ತು ಬಾಲ್ಯ ವಿವಾಹ ಪದ್ಧತಿಯಿಂದ ಮಕ್ಕಳನ್ನು ರಕ್ಷಿಸುವ ಅವರ ಹಕ್ಕುಗಳನ್ನು




ಅನುಭವಿಸಲು ಉತ್ತಮವಾದ ವೇದಿಕೆಗಳನ್ನು ಕಲ್ಪಿಸುವುದರ ಮೂಲಕ ಅವರ ಅಭಿಪ್ರಾಯಕ್ಕೆ ಮನ್ನಣೆ ನೀಡಿ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ನಾವೆಲ್ಲರೂ ಅವಕಾಶ ನೀಡುತ್ತಾ, ಯಾವುದೇ ಮಗು ಶಿಕ್ಷಣದಿಂದ ವಂಚಿತನಾಗದೆ ಅವರ ಹಕ್ಕನ್ನು ಪಡೆಯುವಂತೆ ಪ್ರೇರಣೆ ನೀಡುವ ಜವಾಬ್ದಾರಿ ಸ್ಥಳೀಯ ಸರ್ಕಾರದ ಮೇಲಿದೆ ಎಂದರು. ಅಂಗನವಾಡಿಗೆ ಸಂಬಂಧಿಸಿದಂತೆ ಶೌಚಾಲಯಗಳ ನಿರ್ಮಾಣ ಆಟಿಕೆ ಸಾಮಾನುಗಳು ಮತ್ತು ಮಕ್ಕಳಿಗೆ ಸಮವಸ್ತ್ರಹೊಸ ಅಂಗನವಾಡಿ ಕೇಂದ್ರಗಳಿಗೆ ಜಾಗವನ್ನು ಗುರುತಿಸುವುದು. ಹೀಗೆ ಹಲವಾರು ಸಮಸ್ಯೆಗಳನ್ನ ಹೇಳಿಕೊಂಡರು ಹಾಗೆಯೇ ಕಳೆದ ವರ್ಷ ಮಾಡಿದ ಉತ್ತಮ ಕೆಲಸ ಕಾರ್ಯದ ಬಗ್ಗೆ ಸ್ಥಳೀಯ ಸರ್ಕಾರಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.ಈ ಎಲ್ಲಾ ಸಮಸ್ಯೆಗಳನ್ನು ಆಲಿಸಿದ ನಂತರ ಗ್ರಾಮ ಪಂಚಾಯಿತಿಯ ಕರಹೊಸಲಿಗಾರ ರಾಮಚಂದ್ರ ಮಕ್ಕಳಿಗೆ 2025–2026 ಸಾಲಿನಲ್ಲಿ ಕೈಗೊಂಡ ಕ್ರಿಯಾಯೋಜನೆ ವರದಿಯನ್ನು ಮಂಡಿಸಿದರು ನಂತರ ಎಲ್ಲಾ ಮಕ್ಕಳಿಗೆ ಅಭಿನಂದನೆ ಸಲ್ಲಿಸಿ ಬಳಿಕ 10ನೇ ತರಗತಿಯಲ್ಲಿ ಅತ್ಯುನ್ನತ ಸ್ಥಾನಗಳಿಸಿರುವ ಎಲ್ಲಾ ಮಕ್ಕಳಿಗೆ ಬಹುಮಾನವನ್ನು ಕೊಡುದಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಧನಂಜಯ ಅವರು ಮಕ್ಕಳಿಗೆ ಉರಿದುಂಬಿಸಿದರು. ಎಲ್ಲಾ ಮಕ್ಕಳಿಗೆ ಸಿಹಿ ತಿಂಡಿ ಹಂಚಿಶುಭ ಕೋರಿದರು. ಈ ಸಂದರ್ಭದಲ್ಲಿ ಹನುಮಂತರಾಯ, ಶಾಲಾ ಮುಕ್ಯೋಪಾಧ್ಯಾಯ ಶಿವಜಾತಪ್ಪ, ಸರಕಾರಿ ಪ್ರೌಢ ಶಾಲೆ ಮುಕ್ಯೋಪಾಧ್ಯಾಯ ಆನಂದ ನಾಯಕ, ಸಮೂಹ ಸಂಪನ್ಮೂಲ ವ್ಯಕ್ತಿ ಶ್ರೀಶೈಲ,

**ಮುಸ್ಟೂರೂ ಗ್ರಾಮ ಪಂಚಾಯತಯ ವ್ಯಾಪ್ತಿಯಲ್ಲಿ ಬರುವಂತಹ ಶಾಲೆಗಳಾದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಚಿಂತಲ ಕುಂಟ ಮುಷ್ಟೂರ್ ಶಿವಂಗಿ ಪಿಲಿಗುಂಡ ತೆಗ್ಗಿಹಾಳ. ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಾದ ಧರ್ಮ ನಾಯಕ್ ತಾಂಡ ,ಆಲ್ದರ್ತಿ, ಗೆಜ್ಜೆ ಬಾವಿ,ಶಾಖಾಪುರ್ ಜರದ ಬಂಡಿ, ಹುನಗುಂದ ಬಾಡ, ಗಲಿಗಿನವರದೊಡ್ಡಿ ಶಾಲೆಯ ಮಕ್ಕಳು ತಮ್ಮ ಸಮಸ್ಯೆಗಳನ್ನು ವೇದಿಕೆಯ ಮುಖಂಡರ ಮುಂದೆ ಹಂಚಿಕೊಂಡರು.**

**ಮಕ್ಕಳ ಶಿಕ್ಷಣಕ್ಕೆ ಪೂರಕವಾದ ಅಂಶಗಳಾದ ಪ್ರತ್ಯೇಕ ಶೌಚಾಲಯಗಳು ಕುಡಿಯುವ ನೀರು ಮೈದಾನ ಸಮತಟ್ಟು ಬಸ್ಸಿನ ಸೌಕರ್ಯಗಳು ಹಾಗೂ ಶಿಕ್ಷಕರ ಕೊರತೆ ಶಾಲೆ ಕಟ್ಟಡಗಳ ಕೊರತೆ ಶಾಲೆಗೆ ಹೋಗಲು ದಾರಿಗಳ ದುರಸ್ತಿ ಶಾಲೆಯಿಂದ ಹೊರಗುಳಿದ ಮಕ್ಕಳ ಸಮಸ್ಯೆ ಇನ್ನು ಮುಂತಾದ ಸಮಸ್ಯೆಗಳನ್ನು ಹವಾಲ್ ಗಳ ಮೂಲಕ ಹಂಚಿಕೊಂಡರು.**

ಗ್ರಾಮ ಪಂಚಾಯತ್ ಸದಸ್ಯ ಮಲ್ಲಿಕಾರ್ಜುನ ಮುಷ್ಟೂರು, ಅಂಗನವಾಡಿ ಹಿರಿಯ ಕಾರ್ಯಕರ್ತೆ ಚನ್ನಬಸ್ಸಮ್ಮ ಮುಷ್ಟೂರ್ ಸೇರಿದಂತೆ ಶಾಲಾ ಎಸ್ ಡಿ ಎಂ ಸಿ ಅಧ್ಯಕ್ಷ, ಉಪಾಧ್ಯಕ್ಷ ಸೇರಿದಂತೆ ಆಶಾ ಅಂಗನವಾಡಿ ಕಾರ್ಯಕರ್ತರು ಶಾಲಾ ಸಿಬ್ಬಂದಿಗಳು ಹಾಗೂ ಮಕ್ಕಳು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### MD ಇಲಾಜ್ ಬಿತ್ ತದ್ಬೀರ್ ಯುನಾನಿ ವೈದ್ಯಕೀಯ ಕೋರ್ಸ್

ಇಲಾಜ್ ಬಿತ್ ತದ್ಬೀರ್ ಯುನಾನಿ ವೈದ್ಯಕೀಯದ ಒಂದು ಪ್ರಮುಖ ಶಾಖೆಯಾಗಿದ್ದು, ಇದು ಔಷಧಿ ಬಳಕೆಯಿಲ್ಲದ (Non-pharmacological) ಚಿಕಿತ್ಸಾ ವಿಧಾನಗಳ ಮೇಲೆ ಕೇಂದ್ರೀಕರಿಸಿದೆ. ಇಲಾಜ್ ಬಿತ್ ತದ್ಬೀರ್ ಯುನಾನಿ ವೈದ್ಯಕೀಯದ ಮೂಲಭೂತ ಚಿಕಿತ್ಸಾ ಪದ್ಧತಿ.ಇದು ಔಷಧಿಗಳಿಲ್ಲದೆ ದೇಹದ ತಬೀಯತ್ (Tabiyat ? ಸಹಜ ಗುಣಮುಖ ಶಕ್ತಿ) ಯನ್ನು ಸಮತೋಲನಕ್ಕೆ ತಂದು ರೋಗವನ್ನು ಗುಣಪಡಿಸುವುದು. ಇಲಾಜ್ ಬಿಟ್ ತಡ್ಬೀರ್ (ರೆಜಿಮೆಂಟಲ್ ಥೆರಪಿ) ಯುನಾನಿ ವೈದ್ಯಕೀಯ ವ್ಯವಸ್ಥೆಯಲ್ಲಿನ ಒಂದು ಚಿಕಿತ್ಸಾ ವಿಧಾನವಾಗಿದ್ದು, ಇದು ನಿರ್ದಿಷ್ಟ ಕಾರ್ಯವಿಧಾನಗಳು, ತಂತ್ರಗಳು ಮತ್ತು ಸಾಧನಗಳ ಮೂಲಕ ಒಟ್ಟಾರೆ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಮತ್ತು ಕಾಯಿಲೆಗಳನ್ನು ನಿರ್ವಹಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಇದನ್ನು ಸ್ವತಂತ್ರವಾಗಿ ಬಳಸಬಹುದು ಅಥವಾ ಫಾರ್ಮಾಕೋಥೆರಪಿ, ಡಯೆಟ್ ಥೆರಪಿ ಮತ್ತು ಶಸ್ತ್ರಚಿಕಿತ್ಸೆಯಂತಹ ಇತರ ಚಿಕಿತ್ಸಾ ವಿಧಾನಗಳೊಂದಿಗೆ ಸಂಯೋಜಿಸಬಹುದು. ? ಔಷಧಿ ಇಲ್ಲದೆ ದೇಹದ ಸಹಜ ಗುಣಮುಖ ಶಕ್ತಿಯನ್ನು ಬಳಸಿಕೊಂಡು ರೋಗ ಚಿಕಿತ್ಸೆ ಮಾಡುವುದು. ಜೀವನಶೈಲಿ, ಆಹಾರ, ವ್ಯಾಯಾಮ ಮತ್ತು ಶುದ್ಧೀಕರಣ ವಿಧಾನಗಳ ಮೂಲಕ ರೋಗ ನಿವಾರಣೆ. ಪ್ರವೇಶ ಸಾಮಾನ್ಯವಾಗಿ: AIAPGET (All India AYUSH Post Graduate Entrance Test) ಮೂಲಕ ಕೆಲವೊಂದು ಖಾಸಗಿ ಕಾಲೇಜುಗಳಲ್ಲಿ: ಮೆರಿಟ್ / ಕೌನ್ಸೆಲಿಂಗ್ ಆಧಾರಿತ ಪ್ರವೇಶ. ಚಿಕಿತ್ಸೆ ನೀಡುವ ರೋಗಗಳು ಸಂಧಿವಾತ (Arthritis), ಬೆನ್ನು ಮತ್ತು ಕುತ್ತಿಗೆ ನೋವು, ಮೋಟಾಪು (Obesity), ನರರೋಗಗಳು, ಚರ್ಮ ರೋಗಗಳು, ಮೈಗ್ರೇನ್ ಮತ್ತು ತಲೆನೋವು, ಜೀವನಶೈಲಿ ರೋಗಗಳು (Lifestyle diseases) ದೇಹದ ಸಹಜ ಗುಣಮುಖ ಶಕ್ತಿ ರೋಗ = ತಬೀಯತ್ ಸಮತೋಲನ ಕಳೆದುಕೊಂಡ ಸ್ಥಿತಿ ಇಲಾಜ್ ಬಿತ್ ತದ್ಬೀರ್ ತಬೀಯತ್ ಪುನಃ ಸಮತೋಲನಕ್ಕೆ ತರುವುದು, ನೀವು: ಔಷಧಿ ಇಲ್ಲದೆ ಚಿಕಿತ್ಸೆ ನೀಡಲು ಆಸಕ್ತಿ ಹೊಂದಿದ್ದರೆ Hijama / Cupping / Massage ನಲ್ಲಿ ಪರಿಣತಿ ಪಡೆಯಲು ಬಯಸಿದರೆ Lifestyle diseases ಮೇಲೆ ಕೆಲಸ ಮಾಡಲು ಇಚ್ಛಿಸಿದರೆ ಸ್ವಂತ ಕ್ಲಿನಿಕ್ ಅಥ–ವಾ ಥೆರಪಿ ಸೆಂಟರ್ ಆರಂಭಿಸಲು ಯೋಚಿಸುತ್ತಿದ್ದರೆ.

## ಜನವರಿ 2ರಂದು ತ್ರೈಮಾಸಿಕ ಕೆಡಿಪಿ ಸಭೆ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 15 (ಕರ್ನಾಟಕ ವಾರ್ತೆ): ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ಆರ್.ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜನವರಿ 2ರಂದು ಬೆಳಗ್ಗೆ 11 ಗಂಟೆಗೆ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ.**

ಪ್ರಗತಿ ಮಾಹಿತಿಯೊಂದಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಗೆ ಕಡ್ಡಾಯ ಹಾಜರಾಗುವಂತೆ

## ವಾಹನಗಳ ಸರಬರಾಜಿಗೆ ಅರ್ಹ ಸಂಸ್ಥೆಗಳಿಂದ ಅರ್ಜಿ ಆಹ್ವಾನ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 15 (ಕರ್ನಾಟಕ ವಾರ್ತೆ): ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಸಂಚಾರಿ ಆರೋಗ್ಯ ಘಟಕಗಳಿಗೆ ಅವಶ್ಯಕವಾದ ಒಟ್ಟು 06 ವಾಹನಗಳು ತಾಲೂಕು ಮಟ್ಟದಲ್ಲಿ ಸಂಚಾರಿ ಆರೋಗ್ಯ ತಂಡಗಳಿಗೆ ವಾಹನಗಳನ್ನು ಸರಬರಾಜು ಮಾಡಲು ಅರ್ಹ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

2026ರ ಜನವರಿಯಿಂದ 2026ರ ಮಾರ್ಚ ತಿಂಗಳಿನವರೆಗೂ ಒಟ್ಟು ಮೂರು ತಿಂಗಳ ಅವಧಿಗೆ ಸೇವೆಯನ್ನು ಒದಗಿಸಬೇಕು. ಆಸಕ್ತರು ಡಿಸೆಂಬರ 18 ರ ಸಂಜೆ 5:30 ಗಂಟೆಯೊಳಗೆ ಅರ್ಜಿಗಳನ್ನು ವೆಬ್‌ಸೈಟ್ ವಿಳಾಸ: ್ಣಣಠಿ://ಇರಿರಿ. ಇಚಿಡಿಟಿಚಿಣಚಿಇಚಿ.ರಿಠ.ಟಿ ನಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದ, ಡಿ.ಪಿ.ಎಂ.ಯು. ವಿಭಾಗಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 22ರಿಂದ ಜಿಲ್ಲೆಯ ವಿವಿಧ ತಾಲ್ಲೂಕಿನಲ್ಲಿ ಜೆಸ್ಕಾಂ ಗ್ರಾಹಕರ ಕುಂದುಕೊರತೆ ತ್ರೈಮಾಸಿಕ ಸಭೆ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 15 (ಕರ್ನಾಟಕ ವಾರ್ತೆ): ಜಿಲ್ಲೆಯ ವಿವಿಧ ತಾಲ್ಲೂಕಿನ ಜೆಸ್ಕಾಂ ಉಪ ವಿಭಾಗಗಳಲ್ಲಿ ಗ್ರಾಹಕರ ಕುಂದುಕೊರತೆ ತ್ರೈಮಾಸಿಕ ಸಭೆಯನ್ನು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ವಿವಿಧ ದಿನಾಂಕಗಳಂದು ಹಮ್ಮಿಕೊಳ್ಳಲಾಗಿದ್ದು, ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗಿ ತಮ್ಮ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ.**

ಡಿಸೆಂಬರ್ 22ರ ಬೆಳಿಗ್ಗೆ 10ಗಂಟೆಗೆ ರಾಯಚೂರು ನಗರ ಉಪ ವಿಭಾಗ–1 ಹಾಗೂ ಮಧ್ಯಾಹ್ನ 3ಗಂಟೆಗೆ ಉಪ ವಿಭಾಗ–2, ಡಿಸೆಂಬರ್ 29ರ ಬೆಳಿಗ್ಗೆ 10ಗಂಟೆಗೆ ದೇವದುರ್ಗ ಹಾಗೂ ಮಧ್ಯಾಹ್ನ 3ಗಂಟೆಗೆ ಸಿರವಾರ, ಡಿಸೆಂಬರ್ 30ರ ಬೆಳಿಗ್ಗೆ 10ಗಂಟೆಗೆ ಲಿಂಗಸುಗೂರು ಹಾಗೂ ಮಧ್ಯಾಹ್ನ 3ಗಂಟೆಗೆ ಮಸ್ಕಿಯಲ್ಲಿ ನಡೆಯುವ ಗ್ರಾಹಕರ ಕುಂದುಕೊರತೆ ತ್ರೈಮಾಸಿಕ ಸಭೆಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗಿಯಾಗುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೂ. 5 ಲಕ್ಷ ಬಾಕಿ ವಸೂಲಿಗಾಗಿ :ಮಾನ್ವಿ ತಾಲೂಕು ಪಂಚಾಯಿತಿ ಕಚೇರಿ ಸಾಮಗ್ರಿಗಳ ಜಪ್ತಿ

❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಸಾಮಾಗ್ರಿಗಳ ಖರೀದಿ ಮೊತ್ತವನ್ನು ಪಾವತಿಸದೆ ನಿರ್ಲಕ್ಷ್ಯ ವಹಿಸಿದ್ದ ಹಿನ್ನೆಲೆಯಲ್ಲಿ, ಪಟ್ಟಣದ ತಾಲೂಕು ಪಂಚಾಯಿತಿ ಕಚೇ–ರಿಯಲ್ಲಿದ್ದ ಹಲ್ಮಾರಿ, ಟೇಬಲ್, ಕುರ್ಚಿಗಳು, ಕಂಪ್ಯೂಟರ್, ಪ್ರಿಂಟರ್ ಸಾಮಾಗ್ರಿಗಳನ್ನು ನ್ಯಾಯಾಲಯದ ಆದೇಶದಂತೆ ಜಪ್ತಿ ಮಾಡಿದ ಘಟನೆ ಸೋಮವಾರ ನಡೆಯಿತು.**

ತಾಲೂಕಿನ ಉಟಕನೂರು ಗ್ರಾಮ ಪಂಚಾಯಿತಿಗೆ ವಿವಿಧ ರೀತಿಯ ಸಾಮಾಗ್ರಿಗಳನ್ನು ಪೂರೈಸಿದ್ದ ಪೋತ್ನಾಳ ಗ್ರಾಮದ ಬಾಲಾಜಿ ಹಾರ್ಡವೇರ್ ಅಂಗಡಿ ಮಾಲಿಕ ರಾಮಕೃಷ್ಣ ಅವರು, ಪೂರೈಸಿದ ಸಾಮಾಗ್ರಿಗಳ ಖರೀದಿ ಮೊತ್ತವನ್ನು ಗ್ರಾಮ ಪಂಚಾಯಿತಿಯಿಂದ ಪಾವತಿಸದೆ ಇರುವ ಹಿನ್ನೆಲೆಯಲ್ಲಿ ನ್ಯಾಯಾಲಯದ ಮೊರೆಹೋದಿದ್ದರು. ಈ ಪ್ರಕರಣವನ್ನು ನ್ಯಾಯಾಲಯವು ಸುದೀರ್ಘವಾಗಿ ಪರಿಶೀಲಿಸಿ, ಅಂದಾಜು ರೂ. 5 ಲಕ್ಷ ಮೊತ್ತದ ಬಾಕಿ ವಸೂಲಾತಿಗಾಗಿ ಸಂಬಂಧಪಟ್ಟ ಗ್ರಾಮ ಪಂಚಾಯಿತಿಗೆ ಸೇರಿದ ಸಾಮಾಗ್ರಿಗಳನ್ನು ಜಪ್ತಿ ಮಾಡುವಂತೆ ಆದೇಶ ಹೊರಡಿಸಿತ್ತು.

ನ್ಯಾಯಾಲಯದ ಆದೇಶದಂತೆ ಕಳೆದ ತಿಂಗಳು ಮೊದಲ ಹಂತದಲ್ಲಿ ಉಟಕನೂರು




ಗ್ರಾಮ ಪಂಚಾಯಿತಿ ಕಚೇರಿಯಲ್ಲಿದ್ದ ಕುರ್ಚಿ, ಟೇಬಲ್ ಹಾಗೂ ಗಣಕಯಂತ್ರಗಳು (ಕಂಪ್ಯೂಟರ್‌ಗಳು) ಜಪ್ತಿ ಮಾಡಲಾಗಿತ್ತು. ಆದ–ರೂ ಸಹ ಬಾಕಿ ಮೊತ್ತವು ಸಂಪೂರ್ಣವಾಗದ ಹಿನ್ನೆಲೆಯಲ್ಲಿ, ನ್ಯಾಯಾಲಯದ ಸೂಚನೆಯಂತೆ ಮುಂದುವರೆದ ಜಪ್ತಿ ಕ್ರಮ ಕೈಗೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಇಂದು ಮಾನ್ವಿ ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ಇದ್ದ ಹಲ್ಮಾರಿ, ಟೇಬಲ್, ಕುರ್ಚಿಗಳು ಸೇ–ರಿದಂತೆ ಇನ್ನಿತರ ಕಚೇರಿ ವಸ್ತುಗಳನ್ನು ಜಪ್ತಿ ಮಾಡಲಾಗಿದ್ದು, ಸಾರ್ವಜನಿಕ ವಲಯದಲ್ಲಿ ಈ ಘಟನೆ ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ. ಸರ್ಕಾರ ಜಾರಿಗೆ ತಂದಿರುವ ವಿವಿಧ ಗ್ರಾಮೀಣಾಭಿವೃದ್ಧಿ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳಬೇಕಾದ ಸಂದರ್ಭದಲ್ಲಿ, ಇಂತಹ ಘಟನೆಗಳು ಆಡಳಿತ ವ್ಯವಸ್ಥೆಯ ಮೇಲಿನ ಜನರ ನಂಬಿಕೆಗೆ ಧಕ್ಕೆ ತರುತ್ತಿವೆ ಎಂಬ ಅಭಿಪ್ರಾಯಗಳು ವ್ಯಕ್ತವಾಗಿವೆ.

ನ್ಯಾಯಾಲಯದ ಆದೇಶದಂತೆ ಜಪ್ತಿ ಮಾಡಲಾದ ಸಾಮಗ್ರಿಗಳಲ್ಲಿ ಕೈಯೋಸೆರಾ ಕಂಪನಿಯ ಒಂದು ಝೆರಾಕ್ಸ್ ಯಂತ್ರ (ರೂ. 1,50,000), ಒಂದು ವೀಲ್‌ಚೇರ್ (ರೂ. 500), ಆರು ಗಣಕಯಂತ್ರಗಳು (ರೂ. 1,00,000), ಆರು ಟೇಬಲ್‌ಗಳು (ರೂ. 16,000), ನಾಲ್ಕು ಗೋಡ್ರೇಜ್ ಅಲ್ಮಾರಿಗಳು (ರೂ. 15,000) ಹಾಗೂ 25 ಕುರ್ಚಿಗಳು (ಕಪ್ಪು ಮತ್ತು ಕೆಂಪು ಪ್ಲಾಸ್ಟಿಕ್ ಕುರ್ಚಿಗಳು ? 7 ಸೇರಿ) (ರೂ. 25,000) ಒಳಗೊಂಡಿವೆ.

ಗ್ರಾಮ ಪಂಚಾಯಿತಿಗಳ ಮೂಲಕ ಬೀದಿ ದೀಪ, ಕುಡಿಯುವ ನೀರು, ಶಾಲೆ ಹಾಗೂ ಅಂಗನವಾಡಿಗಳಿಗೆ ಮೂಲಭೂತ ಸೌಲಭ್ಯ, ಶೌಚಾಲಯ ನಿರ್ಮಾಣ, ಕೆರೆ ಕಲ್ಯಾಣಿಗಳ ಪುನಶ್ಚೇತನ ಸೇರಿದಂತೆ ಹಲವಾರು ಅಭಿವೃದ್ಧಿ ಕಾರ್ಯಕ್ರಮಗಳನ್ನು ಸರ್ಕಾರ ಜಾ–ರಿಗೆ ತಂದಿದ್ದರೂ, ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಅಕ್ರಮಗಳಿಂದ ಇಂತಹ ಕಾನೂನು ಕ್ರಮಗಳು ಅನಿವಾರ್ಯವಾಗುತ್ತಿರುವುದು ದುರದೃಷ್ಟಕರ ಸಂಗತಿಯಾಗಿದೆ. ನ್ಯಾಯಾಲಯದ ಆದೇಶದ ಬಳಿಕವೂ ಬಾಕಿ ಮೊತ್ತ ಪಾವತಿಯಾಗದ ಕಾರಣ ತಾಲೂಕು ಪಂಚಾಯಿತಿ ಮಟ್ಟದ ಕಚೇರಿಯ ಸಾಮಾಗ್ರಿಗಳವರೆಗೆ ಜಪ್ತಿ ಕ್ರಮ ವಿಸ್ತರಿಸಿರುವುದು, ಮುಂದಿನ ದಿನಗಳಲ್ಲಿ ಸಂಬಂಧಪಟ್ಟ ಅಧಿಕಾ–ರಿಗಳಿಗೆ ಎಚ್ಚರಿಕೆಯ ಸಂದೇಶವಾಗಬೇಕು ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟಿದ್ದಾರೆ.

# ವೀರಶೈವ ಲಿಂಗಾಯತ ಸಮಾಜದಿಂದ ಡಾ.ಶಾಮನೂರ ಶಿವಶಂಕರಪ್ಪ ನವರಿಗೆ ಭಾವಪೂರ್ಣ ಶ್ರದ್ಧಾಂಜಲಿ




❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಬಸವ ವೃತ್ತದಲ್ಲಿ ವೀರಶೈವ ಲಿಂಗಾಯತ ಸಮಾಜದ ಹಿರಿಯ ಚೇತನ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯಾಧ್ಯಕ್ಷರಾದ ಡಾ.ಶಾಮನೂರ ಶಿವಶಂಕರಪ್ಪ ರವರು ಲಿಂಗೈಕ್ಯರಾಗಿರುವ ಹಿನ್ನೇಲೆಯಲ್ಲಿ ತಾಲೂಕು ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.**

ತಾಲೂಕ ವೀರಶೈವ ಸಮಾಜದ ಅಧ್ಯಕ್ಷರಾದ ಹರಿಹರ ಪಾಟೇಲ್ ಮಾತನಾಡಿ ಡಾ.ಶಾಮನೂರ ಶಿವಶಂಕರಪ್ಪ ರವರಂತಹ ಮುತ್ಸದಿಗಳನ್ನು ಹಾಗೂ ಸಮಾಜದ ಹಿತಚಿಂತಕರನ್ನು ಕಳೆದು ಕೊಂಡು ವೀರಶೈವ ಲಿಂಗಾಯತ ಸಮಾಜಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಅವರ ಅತ್ಮಕ್ಕೆ ಶಿವ ಶಾಂತಿಯನ್ನು ನೀಡಲಿ ಎಂದು ತಿಳಿಸಿದರು. ಡಾ.ಶಾಮನೂರ ಶಿವಶಂಕರಪ್ಪನವರ ಅತ್ಮಕ್ಕೆ ಶಾಂತಿ ಕೋರಿ ಸಮಾಜದ ನೂರಾರು ಜನರು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿ ಮೌನಾಚಾರಣೆ ನಡೆಸಿದರು.

ತಾಲೂಕ ವೀರಶೈವ ಸಮಾಜದ ತಾ. ಕಾರ್ಯಾಧ್ಯಕ್ಷರಾದ ಶ್ರೀಧರ್ ಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾದ ಜಗದೀಶ್ ಓತೂರ್, ಮುಖಂಡರಾದ ವೀರನಗೌಡ ಸಂಗಪುರ್, ಮಲ್ಲಿಕಾರ್ಜುನ್ ಗೌಡ ಗಣೇಕಲ್, ಬಸವರಾಜಪ್ಪ ಗೌಡ ಚಿಮಲಾಪುರ್, ರಾಮನಗೌಡ ಹೀರಾ,ಅಮರೇಗೌಡ ಉಮಳಿಹೊಸೂರ್, ಜೆ.ಸುಧಾಕರ್, ಶ್ರೀಶೈಲ್‌ಗೌಡ , ಗುರುಸಿದ್ದಪ್ಪಗೌಡ ಕಣ್ಣೂರು, ಹೊಯ್ಸಳ ಸ್ವಾಮಿ, ಲೋಕನಾಥ್ , ವಿರುಪಾಕ್ಷಿಗೌಡ, ಬಸವನಗೌಡ ಕರವೇ, ಹೊಸಕೋಟಿ ಶರಣಪ್ಪ, ಮೌನೇಶ, ಚಂದ್ರಪ್ಪ ಗೌಡ ಚಿಕ್ಕಲಪರವಿ, ವಿರುಪಣ್ಣ ,ಮಲ್ಲಭದ್ರಗೌಡ, ಶಶಿಧರ್ ಗೌಡ, ರುದ್ರಮುನಿ ಸ್ವಾಮಿ, ಸುರೇಶ್ ನಾಡಗೌಡ, ವಿ.ಟಿ. ಶರಣ, ಹಂಪನಗೌಡ, ರಾಜು ಸ್ವಾಮಿ, ವೀರಭದ್ರಪ್ಪ ಬಣಕಾರ್, ಸಿ.ರಾಜು ಸೇರಿದಂತೆ ಇನ್ನಿತರರು ಇದ್ದರು. ಮಾನ್ವಿ: ಪಟ್ಟಣದ ಬಸವ ವೃತ್ತದಲ್ಲಿ ಡಾ.ಶಾಮನೂರ ಶಿವಶಂಕರಪ್ಪ ನವರಿಗೆ ಭಾವಪೂರ್ಣ ಶ್ರಾದ್ಧಂಜಲಿ ಸಲ್ಲಿಸಲಾಯಿತು.

# ಕಲ್ಮಠ ಪದವಿಪೂರ್ವ ಕಾಲೇಜಿನ ಎನ್.ಎಸ್.ಎಸ್. ಘಟಕದ ಸಮಾರೋಪ ಸಮಾರಂಭ

❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ತಮ್ಮಾಪುರ ಗ್ರಾಮದಲ್ಲಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಮಾನ್ವಿಯ ಕಲ್ಮಠ ಪದವಿಪೂರ್ವ ಕಾಲೇಜಿನ ಎನ್.ಎಸ್.ಎಸ್. ಘಟಕದ ವಿಶೇಷ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಶ್ರೀನಿವಾಸ್ ಕ್ಯಾಂಪಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಗುಂಡಪ್ಪ ತಮ್ಮಾಪುರ ವಿಶೇಷ ಉಪನ್ಯಾಸ ನೀಡಿ.**

ಯುವಕರು ತಮ್ಮ ವಿದ್ಯಾರ್ಥಿ ಜೀವನದಲ್ಲಿ ದೊರೆಯುವ ಸಮಯವನ್ನು ಸದುಪಯೋಗ ಪಡಿಸಿಕೊಂಡಲ್ಲಿ ಜೀವನದಲ್ಲಿ ಉನ್ನತ ಸಾಧನೆಯನ್ನು ಮಾಡುವುದಕ್ಕೆ




ಸಾಧ್ಯವಾಗುತ್ತದೆ ಯುವ ಸಮುದಾಯ ನಮ್ಮ ದೇಶದ ಸ್ವಾತಂತ್ರ್ಯ ಹೋರಾಟಕ್ಕಾಗಿ ತಮ್ಮ ಜೀವನವನ್ನು ಸಮರ್ಪಿಸಿದ ದೇಶ ಭಕ್ತರಾದ ಭಗತ್ ಸಿಂಗ್, ರಾಜಗುರು, ಸುಖದೇವ್ ರಂತಹವರನ್ನು ತಮ್ಮ ಅದರ್ಶವಾಗಿಸಿಕೊಳ್ಳಬೇಕು ಹಾಗೂ ಸಮಾಜದಲ್ಲಿ ಅಗತ್ಯವಿರುವವ–ರಿಗೆ ಸಹಾಯವನ್ನು ಮಾಡುವ ಮೂಲಕ ಅದರ್ಶ ವ್ಯಕ್ತಿಗಳಾಗಬೇಕು ಎಂದು ತಿಳಿಸಿದರು. ಕಲ್ಮಠ ಕಾಲೇಜಿನ ಪ್ರಾಚಾರ್ಯರಾದ ಎಸ್. ಎಸ್.ಪಾಟೀಲ್ ಮಾತನಾಡಿ ಗ್ರಾಮಸ್ಥರ ಸಹಾಕರದಿಂದ ಎನ್.ಎಸ್.ಎಸ್.ಶಿಬಿರ ಯಶಸ್ವಿಯಾಗುವುದಕ್ಕೆ ಸಾಧ್ಯವಾಗಿದೆ ಶಿಬಿರದ ಅನುಭವಗಳನ್ನು ವಿದ್ಯಾರ್ಥಿಗಳು ಪಡೆದುಕೊಂಡು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು.

ಕಾರ್ಯಕ್ರಮದಲ್ಲಿ ಶ್ರೀ ರೇಣುಕಾ ಎಲ್ಲಮ್ಮ ದೇವಿ ಶಕ್ತಿ ಪೀಠದ ಶ್ರೀ ಕುಬೇರಪ್ಪ ಸ್ವಾಮಿಗಳು, ಎನ್ ಎಸ್ ಎಸ್ ಕಾರ್ಯಕ್ರಮಾಧಿಕಾರಿಗಳಾದ ನರಸಣ್ಣ ,ಶಾಲೆಯ ಮುಖ್ಯಗುರುಗಳಾದ ಹಂಪಣ್ಣ, ಸಹ ಶಿಕ್ಷಕರಾದ ತಿಮ್ಮಪ್ಪ ,ಮುಖಂಡರಾದ ಉರುಕುಂದಪ್ಪ ತಮ್ಮಾಪುರ, ಗ್ರಾ.ಪಂ. ಸದಸ್ಯರಾದ ಲಕ್ಷ್ಮಿ ರಾಘವೇಂದ್ರ, ಕಲ್ಮಠ ವಿದ್ಯಾ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳಾದ ಬಂಗಾರಪ್ಪ, ತಿಮ್ಮಯ್ಯ, ಉಪನ್ಯಾಸಕರಾದ ಮಾರ್ಟಿನ್, ಗೌರಿ, ಸಿದ್ದಪ್ಪ ಸೇರಿದಂತೆ ಇನ್ನಿತರರು ಇದ್ದರು.

# ಚೆನ್ನೈನಿಂದ ಬಳ್ಳಾರಿ ನಗರಕ್ಕೆ ಬರುತ್ತಿದ್ದ ಟ್ರಕ್ ಗೆ ಬೃಹತ್ ಅಪಘಾತ

❏ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ಚೆನ್ನೈನಿಂದ ಬಳ್ಳಾರಿ ನಗರಕ್ಕೆ ದ್ವಿಚಕ್ರ ವಾಹನಗಳನ್ನು ತಂದಿದ್ದ ಟ್ರಕ್ ಬೆಂಕಿಗೆ ಆಹುತಿಯಾಗಿದೆ. ಟ್ರಕ್ ಸಹಿತ 40 ಬೈಕ್‌ಗಳು ಸುಟ್ಟು ಕರಕಲಾಗಿವೆ. ಸೋಮವಾರ ಬೆಳಗ್ಗೆ 5 ಗಂಟೆ ಸುಮಾ–ರಿನಲ್ಲಿ ಈ ಘಟನೆ ನಡೆದಿದ್ದು, ನಾಶಗೊಂಡಿರುವ ದ್ವಿಚಕ್ರವಾಹನಗಳ ಮೌಲ್ಯ ?60 ಲಕ್ಷ ಎಂದು ಅಂದಾಜಿಸಲಾಗಿದೆ.**



ಬಳ್ಳಾರಿ ನಗರದ ಯಮಹಾ ಶೋರೂಂಗೆ 20, ವಿಜಯಪುರದ ಶೋರೂಂಗೆ 20 'ಯಮಹಾ–ಎಫ್‌ಝಡ್' ವಾಹನಗಳನ್ನು ಚೆನ್ನೈನಿಂದ ತಂದಿದ್ದ ಲಾರಿಯನ್ನು ಚಾಲಕ ಭಾನುವಾರ ಮಧ್ಯರಾತ್ರಿ ಬಳ್ಳಾರಿ ನಗರದ ಬೈಪಾಸ್ ಬಳಿ ರಸ್ತೆ ಬದಿಯಲ್ಲಿ ಹಾಕಿ ನಿದ್ರೆಗೆ ಜಾ–ರಿದ್ದ ಎನ್ನಲಾಗಿದೆ. ಮುಂಜಾನೆ 5 ಗಂಟೆ ವೇಳೆ ವಾಹನದಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಸ್ಥಳೀಯರು ಕೂಡಲೇ ಅಗ್ನಿಶಾಮಕ ಇಲಾಖೆಗೆ ಮಾಹಿತಿ ನೀಡಿದ್ದರು. ಅಗ್ನಿಶಾಮಕ ತಂಡ ಸ್ಥಳಕ್ಕೆ ಆಗಮಿಸಿತಾದರೂ ಅಷ್ಟರ ಒಳಗಾಗಿ ವಾಹನಗಳ ಸಹಿತ, ಬೈಕ್‌ಗಳೂ ಬೆಂಕಿಗೆ ಆಹುತಿಯಾಗಿವೆ. ಬೈಕ್ ಅಥವಾ ಟ್ರಕ್‌ನ ಬ್ಯಾಟರಿಯಲ್ಲಿನ ತಾಂತ್ರಿಕ ದೋಷದಿಂದ ಈ ಘಟನೆ ನಡೆದಿರಬಹುದು ಎಂದು ಅಂದಾಜಿಸಲಾಗಿದೆ. ಕಂಪನಿಯ ಅಧಿಕಾರಿಗಳು ಬಂದ ಬಳಿಕ ಎಫ್‌ಐಆರ್ ದಾಖಲಿಸಲಾಗುವುದು ಎಂದು ಗಾಂಧಿನಗರ ಪೊಲೀಸರು ತಿಳಿಸಿದ್ದಾರೆ.

# ಪೋಲಿಯೊ ಬೂತ್ ಮಾಹಿತಿಯನ್ನು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಪಡೆಯಿರಿ: ಡಾ.ಸುರೇಂದ್ರ ಬಾಬು

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 15 (ಕರ್ನಾಟಕ ವಾರ್ತೆ): ಇದೆ ಡಿಸೆಂಬರ್ 21ರ ಭಾನುವಾರ ದಂದು ಹುಟ್ಟಿನಿಂದ ಐದು ವರ್ಷದೊಳಗಿನ ಮಕ್ಕಳಿಗೆ ಎರಡು ಹನಿ ಪೋಲಿಯೊ ಲಸಿಕೆ ಹಾಕುವ ಪಲ್ಸ್ ಪೋಲಿಯೊ ಕಾರ್ಯಕ್ರಮ ರಾಯಚೂರು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ. ನಗರ, ಪಟ್ಟಣಗಳಲ್ಲಿಯ ಜನತೆಯು ತಮ್ಮ ಮನೆಗಳಿಗೆ ಹತ್ತಿರದ ಪೋಲಿಯೊ ಬೂತ್‌ಗಳ ಮಾಹಿತಿಯನ್ನು ಕ್ಯೂಆರ್ ಕೋಡ್ ಸ್ಕ್ಯಾನ್ರ?ನ್ನು ಸ್ಕ್ಯಾನ್ ಮಾಡಿ ತಮ್ಮಗೆ ಹತ್ತಿರದ ಬೂತ್‌ಗಳಲ್ಲಿ ಲಸಿಕೆ ಹಾಕಿ ಅಭಿಯಾನದಲ್ಲಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಪಾಲಕರು ನೋಡಿಕೊಳ್ಳಬೇಕೆಂದು** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರ ಬಾಬು ಮನವಿ ಮಾಡಿದ್ದಾರೆ.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾ–ರಿಗಳು ಇವರ ಸಲಹೆಯಂತೆ ಈ ಬಾರಿ ರಾಯಚೂರು, ಮಾನವಿ, ದೇವದುರ್ಗ, ಲಿಂಗಸೂಗುರು, ಸಿಂಧನೂರು ನಗರ ಪ್ರದೇಶಗಳ ನಾಗರಿಕರಿಗೆ ಬೂತ್ಗಳ ಮಾಹಿತಿ ಕೊರತೆಯಾಗಬಾರದು ಎಂದು ಕ್ಯೂಆರ್ ಕೋಡ್ ಸ್ಕ್ಯಾನರ್ ಸಿದ್ದಪಡಿಸಲಾಗಿದ್ದು, ತಮ್ಮ ಮೊಬೈಲ್ಗಳ ಮೂಲಕ ಸ್ಕ್ಯಾನ್ ಮಾಡಿ ಬೂತ್ಗಳ ಮಾಹಿತಿ ಪಡೆದು ತಮಗೆ ಹತ್ತಿರದಲ್ಲಿರುವ ಬೂತ್ಗಳಲ್ಲಿ ಎರಡು ಹನಿ ಲಸಿಕೆಯನ್ನು ಮಗುವಿಗೆ ಹಾಕಿಸಿ ಪೋಲಿಯೋ ಮೇಲಿನ ನಮ್ಮ ಗೆಲುವನ್ನು ಮುಂದುವರೆಸಲು ಕೈಜೊಡಿಸುವಂತೆ ಕೋರಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ನಮ್ಮ ಭಾರತ ದೇಶದಲ್ಲಿ ಕೊನೆಯ ಪೋಲಿಯೋ ಪ್ರಕರಣ 2011 ಜನವರಿಯಲ್ಲಿ ಪಶ್ಚಿಮ ಬಂಗಾಳ ರಾಜ್ಯದಲ್ಲಿ ವರದಿಯಾದ ನಂತರ ಕಳೆದ 14 ವರ್ಷಗಳಿಂದ ನಮ್ಮ ದೇಶದಲ್ಲಿ ಯಾವುದೇ ಪ್ರಕರಣ ವರದಿಯಾಗಿಲ್ಲ. ಆದರೂ ಸಹ ನೇರೆಯ ರಾಷ್ಟ್ರಗಳಲ್ಲಿ ಪ್ರಕರಣಗಳು ಇರುವುದರಿಂದ ಡಿಸೆಂಬರ್ 21 ರಂದು ದೇಶಾದ್ಯಾಂತ ಲಸಿಕೆ ಹಾಕಲಾಗುತ್ತಿದ್ದು, ನಮ್ಮ ಜಿಲ್ಲೆಯಲ್ಲಿ ಲಸಿಕೆ ಹಾಕಲು ತಂಡಗಳ ರಚನೆ ಮಾಡಲಾಗಿದ್ದು, ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ, ಬಸ್ ನಿಲ್ದಾಣ, ರೈಲು ನಿಲ್ದಾಣ, ಅಂಗನವಾಡಿಗಳಲ್ಲಿ ಮತ್ತು ಶಾಲೆಗಳಲ್ಲಿ ಹಾಗೂ ಕೊಳಚೆ ಪ್ರದೇಶ ಮುಂತಾದೆಡೆ ಬೂತ್ ತೆರೆಯಲಾಗುವುದು.

ಇದಕ್ಕಾಗಿ ಈಗಿನಿಂದಲೆ ಗ್ರಾಮಗಳಲ್ಲಿ ಸಿಬ್ಬಂದಿಯವರು ಖುದ್ದು, ಮನೆ ಭೇಟಿ ನೀಡುತ್ತಿದ್ದಾರೆ. ಇದರೊಂದಿಗೆ ಸ್ಥಳೀಯ ಸಂಸ್ಥೆಗಳ ಕಸ ವಿಲೇವಾರಿ ವಾಹನ, ಆಟೊ ಮೂಲಕ ಮೈಕಿಂಗ್, ಜಾಗೃತಿ ಜಾಥಾ, ಸಾಮಾಜಿಕ ಜಾಲ ತಾಣಗಳ ಮೂಲಕ ನಿರಂತರ ಪ್ರಚಾರವನ್ನು ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಆರ್.ಸಿ.ಹೆಚ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.